MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 251 | ಶನಿವಾರ : 19-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 251 | SATURDAY : 19-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

**ದೇವದುರ್ಗದ ಟೋಲ್ ತಾತ್ಕಾಲಿಕ ಬಂದ್‌ಗೆ ನಿರ್ದೇಶನ : ಜಲಧಾರೆ ಯೋಜನೆಯ ಕಾಮಗಾರಿ ತನಿಖೆಗೆ ಸೂಚನೆ**

# ರಸಗೊಬ್ಬರವನ್ನು ರೈತರಿಗೆ ಸಮರ್ಪಕವಾಗಿ ವಿತರಿಸಲು ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.18–** ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜುಲೈ 18ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿ ರಸಗೊಬ್ಬರ ವಿತರಣೆ ವಿಷಯವು ಚರ್ಚೆಗೆ ಬಂದಿತು.

ರಾಯಚೂರ ಜಿಲ್ಲೆಯಲ್ಲಿ ಕಾಪು ದಾಸ್ತಾನು 6027 ಮೆಟ್ರಿಕ್ ಟನ್ ಪೈಕಿ 2527.48 ಮೆಟ್ರಿಕ್ ಟನ್ ಲಭ್ಯವಿದ್ದು, ರಿಟೇಲ್ ಮಾರಾಟಗಾರಲ್ಲಿ 57,763 ಮೆ ಟನ್ ರಸಗೊಬ್ಬರ ಲಭ್ಯವಿರುತ್ತದೆ. ಜಿಲ್ಲೆಗೆ 1,50,000 ಮೆಟ್ರಿಕ್ ಟನ್ ಬೇಡಿಕೆ ಪೈಕಿ ಇದುವರೆಗೆ 1.45,000 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜು ಆಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಪ್ರಕಾಶ್ ಚವ್ಹಾಣ್ ಅವರು ಸಭೆಗೆ ಮಾಹಿತಿ ನೀಡಿದರು.

ಶಾಸಕರಿಂದ ಅಸಮಾಧಾನ: ರೈತರಿಗೆ ಗೊಬ್ಬರು ಸರಿಯಾಗಿ ತಲುಪುತ್ತಿಲ್ಲ. ಯಾರಿಗೆ ಕೊಡುತ್ತಿದ್ದಾರೆ ಎಂಬುದು ತಿಳಿಯುತ್ತಿಲ್ಲ ಎಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರುವಿಹಾಳ ಅವರು ಅಸಮಾಧಾನ ವ್ಯಕ್ತಪಡಿಸಿದರು. ಶಾಸಕರ ಅಸಮಾಧಾನಕ್ಕೆ ಧನಿಗೂಡಿಸಿದ ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಹಾಗೂ ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಸಕಾಲಕ್ಕೆ ಗೊಬ್ಬರ ಸಿಗದೇ ರೈತರು ಪರದಾಡುತ್ತಿದ್ದಾರೆ ಎಂದರು. ಜಿಲ್ಲೆಯಲ್ಲಿ ರಸಗೊಬ್ಬರ ಪೂರೈಕೆಗೆ ಸರಿಯಾದ ವ್ಯವಸ್ಥೆಯಾಗಬೇಕು ಎಂದು ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ರುದ್ರಾಗೌಡ ಮಹಾಂತಗೌಡ ಹಾಗೂ ಸೋಮಶೇಖರ ಪಾಟೀಲ ಅವರು ಸಲಹೆ ಮಾಡಿದರು.

ಅಧಿಕಾರಿಗಳಿಗೆ ಸೂಚನೆ: ಶಾಸಕರ ಅಭಿಪ್ರಾಯಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಹಕಾರಿ ಸಂಘಗಳು ಮತ್ತು ಖಾಸಗಿ ಮಳಿಗೆಗಳಲ್ಲಿ ಗೊಬ್ಬರ ದಾಸ್ತಾನು ಇರುವ ಬಗ್ಗೆ ಪ್ರತಿದಿನ ಫಲಕದ ಮೂಲಕ ಮಾಹಿತಿ ನೀಡಬೇಕು. ಸರಿಯಾಗಿ ಮಾಹಿತಿ ನೀಡದ




ಖಾಸಗಿ ಮಾರಾಟಗಾರರನ್ನು ಬ್ಲಾಕ್ ಲೀಸ್ಟಗೆ ಸೇರ್ಪಡೆ ಮಾಡಬೇಕು ಎಂದು ಸಚಿವರು, ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರಸಕ್ತ ಸಾಲಿನಲ್ಲಿ ಸಹ ರೈತರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಗೊಬ್ಬರ ಪೂರೈಕೆ ಆಗಬೇಕು ಎಂದು ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದೆ. ಕೃಷಿ ಅಧಿಕಾರಿಗಳು ಜಾಗ್ರುತರಾಗಿ ಕೆಲಸ ಮಾಡಬೇಕು. ರಸಗೊಬ್ಬರದ ಕೊರತೆ ಇರುವ ಬಗ್ಗೆ ತಿಳಿಸಿದಲ್ಲಿ ತಾವು ಕೃಷಿ ಇಲಾಖೆಯ ಕಾರ್ಯದರ್ಶಿಗಳೊಂದಿಗೆ ಮಾತನಾಡುವುದಾಗಿ ಸಚಿವರು ಹೇಳಿದರು.

ಶೇ.32ರಷ್ಟು ಮಳೆ ಕೊರತೆ: ಜಿಲ್ಲೆಯಲ್ಲಿ ಮೇ ತಿಂಗಳಲ್ಲಿ ಶೇ.69ರಷ್ಟು ಹೆಚ್ಚಿನ ಮಳೆಯಾಗಿದೆ. ಜೂನ್ ಮತ್ತು ಜುಲೈನಲ್ಲಿ ಶೇ.32ರಷ್ಟು ಮಳೆ ಕೊರತೆಯಿಂದ ತೊಗರಿ ಮತ್ತು ಹತ್ತಿ ಬೆಳೆಗಳು ನಲುಗುತ್ತಿವೆ. ಜಿಲ್ಲೆಯಲ್ಲಿ 5.53 ಲಕ್ಷ ಹೆಕ್ಟೇರನಲ್ಲಿ ಬಿತ್ತನೆ ಗುರಿ ಪೈಕಿ ಇದುವರೆಗೆ ಶೇ.48 ಹೇಕ್ಟೇರ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಇದುವರೆಗೆ 37 ರೈತ ಸಂಪರ್ಕ ಕೇಂದ್ರಗಳಿಂದ 4856.23 ಕ್ವಿಂಟಲ್ ನಷ್ಟುವ ಭತ್ತ, ತೊಗರಿ, ಸಜ್ಜೆ, ಹೆಸರು, ಮೆಕ್ಕೆಜೋಳ ಹಾಗೂ ಸೂರ್ಯಕಾಂತಿ ಬಿತ್ತನೆ ಬೀಜ ದಾಸ್ತಾನು ಮಾಡಿ ಇದುವರೆಗೆ ರಿಯಾಯಿತಿ ದರದಲ್ಲಿ 3245.21 ಕ್ವಿಂಟಲ್ ಬೀಜ ವಿತರಣೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. *2ನೇ ಪುಟಕ್ಕೆ*



**ಪಿಡಿಓ ಕೊರತೆ ತಪ್ಪಿಸಿ:** ರಾಯಚೂರ ಜಿಲ್ಲೆಯ ಬೇರೆಡೆ ಹಾಕದೇ ದೇವದುರ್ಗ ತಾಲೂಕಿನಲ್ಲಿ ಮಾತ್ರ 40 ಕೀ.ಮಿದೊಳಗೆ ಎರಡು ಟೋಲ್ ಅಳವಡಿಸಿ ಜನರಿಂದ ಹಣ ಸುಲಿಗೆ ಮಾಡುತ್ತಿದ್ದಾರೆ. ಈ ಅನ್ಯಾಯ ಸರಿಪಡಿಸಲೇಬೇಕು. ಇದನ್ನು ಈ ಕೂಡಲೇ ತಾತ್ಕಾಲಿಕವಾಗಿ ರದ್ದುಪಡಿಸಿ ಎಂದು ಶಾಸಕರಾದ ಕರೆಮ್ಮ ಜಿ ನಾಯಕ ಅವರು ಸಭೆಯಲ್ಲಿ ಪಟ್ಟುಹಿಡಿದರು. 33 ಪಂಚಾಯಿತಿಗಳಿಗೆ ಕೇವಲ 6 ಜನ ಮಾತ್ರ ಪಿಡಿಓ ಇದ್ದಾರೆ. ಎಲ್ಲ ಪಂಚಾಯಿತಿಗಳಿಗೆ ಪಿಡಿಓ ನೇಮಕಾತಿಯಾಗಬೇಕು ಎಂದು ಶಾಸಕರು ಮನವಿ ಮಾಡಿದರು. ಈ ಬಗ್ಗೆ ಪ್ರತಿಕ್ರಿಯಿಸಿದ ಸಚಿವರು, ಲೋಕೋಪಯೋಗಿ ಸಚಿವರೊಂದಿಗೆ ತಾವು ಮಾತನಾಡಲಿದ್ದು, ಸದ್ಯಕ್ಕೆ ಟೋಲನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಸರಸ್ವತಿ ಪೂಜೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.18–** ಪಟ್ಟಣದ ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಯುವ ರೆಡ್ ಕ್ರಾಸ್ ಸಹಯೋಗ 'ದೊಂದಿಗೆ ಬಿ.ಎ. ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ತರಗತಿ ಪ್ರಾರಂಭೋತ್ಸವ ಮತ್ತು ಸರಸ್ವತಿ ಪೂಜಾ ಕಾರ್ಯಕ್ರಮವನ್ನು ನೆರವೇರಿಸಲಾಯಿತು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಶಂಕರಪ್ಪ ಅಂಗಡಿ ಅವರು, ಕಾಲೇಜು ನಡೆದು ಬಂದ ಹಾದಿ ಹಾಗೂ ಹಳೆ ವಿದ್ಯಾರ್ಥಿಗಳ ಸಾಧನೆಗಳನ್ನು ಸ್ಮರಿಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಾಜಿ ಯೋಧ ಆಂಜನೇಯ ಜೆಲ್ಲಿ ನೀರಮಾನ್ವಿ ಅವರು, ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ, ಪುಸ್ತಕಗಳೊಂದಿಗೆ ಹೆಚ್ಚು ಸಮಯ ಕಳೆಯಲು ಸಲಹೆ ನೀಡಿದರು. ಉತ್ತಮ ಭವಿಷ್ಯಕ್ಕಾಗಿ ಇದು ಅಗತ್ಯ ಎಂದು ಅವರು ಹೇಳಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಸಂಸ್ಥೆಯ ಅಧ್ಯಕ್ಷ ಆಂಜನೇಯ ನಸಲಾಪುರ ಅವರು, ಶ್ರೀ ವೆಂಕಟೇಶ್ವರ ಪದವಿ ಮಹಾವಿದ್ಯಾಲಯವನ್ನು ಅಜರಾಮರವಾಗಿ ಉಳಿಸಿಕೊಂಡು ಹೋಗಲು ಉಪನ್ಯಾಸಕ ತಂಡ ಸದಾ ಸಿದ್ಧವಾಗಿದೆ ಎಂದರು. ವಿದ್ಯಾರ್ಥಿಗಳು ಉಪನ್ಯಾಸಕರ ಮಾರ್ಗ ದರ್ಶನದಲ್ಲಿ ಮುಂದುವರಿಯಬೇಕು ಮತ್ತು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕಠಿಣ ಪರಿಶ್ರಮದಿಂದ ಅಭ್ಯಾಸ ಮಾಡಬೇಕು ಎಂದು ತಿಳಿಸಿದರು. ಎಸ್. ಎಂ.ವಿ.ಓ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ರಾದ ಶ್ರೀದೇವಿ ಅವರು ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಹಿಂಜರಿಯದೆ ಧೈರ್ಯದಿಂದ ಮುನ್ನುಗ್ಗ ಬೇಕು ಎಂದು ಪ್ರೇರೇಪಿಸಿದರು.

ಶ್ರೀ ವೆಂಕಟೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಮಹಾಂತೇಶ್ ಓಲೇಕಾರ್ ಅವರು ಮಾತನಾಡಿ, ಈ ಶಿಕ್ಷಣ ಸಂಸ್ಥೆಯಲ್ಲಿ ಅನೇಕ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಿ ಉನ್ನತ ಸ್ಥಾನಮಾನಗಳನ್ನುಗಳಿಸಿದ್ದಾರೆ. ಬಿ.ಎ. ಪ್ರಥಮ ವರ್ಷದ ವಿದ್ಯಾರ್ಥಿಗಳು ಸಹ ತಮ್ಮ ಭವಿಷ್ಯವನ್ನು ಉತ್ತಮವಾಗಿ ರೂಪಿಸಿಕೊಂಡು ಪೋಷಕರಿಗೆ ಮತ್ತು ಶಿಕ್ಷಕರಿಗೆ ಕೀರ್ತಿ ತರಬೇಕು ಎಂದು ಆಶಿಸಿದರು. ಈ ಕಾರ್ಯಕ್ರಮದಲ್ಲಿ ನೂತನ ಆಡಳಿತ ಮಂಡಳಿಯ ಪದಾಧಿಕಾರಿಗಳಾದ ಡಾ. ಹುಲಿಯಪ್ಪ ಧುಮತಿ, ಚಂದ್ರಶೇಖರ ಎಚ್, ಮಹಿಬೂಬ್ ಮದ್ಲಾಪುರ, ಮಲ್ಲಪ್ಪ ನೆಲ ಕೋಳ, ಶ್ರೀ ವೆಂಕಟೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕರಾದ ಎಂ.ಡಿ. ಅಶ್ರಫ್, ಉಪ 'ನ್ಯಾಸಕರಾದ ಅಂಬಣ್ಣ ನಾಯಕ, ಶೈಲಜಾ, ರೇಣುಕಾ ಹಾಗೂ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತ 'ರಿದ್ದರು. ಕಾರ್ಯಕ್ರಮವನ್ನು ಮಹಿಬೂಬ ಮದ್ಲಾಪುರ ನಿರೂಪಿಸಿದರೆ, ಚಂದ್ರಶೇಖರ ಸ್ವಾಗತಿಸಿದರು ಮತ್ತು ಅಂಬಣ್ಣ ನಾಯಕ ವಂದನಾರ್ಪಣೆ ಮಾಡಿದರು.

## ಜಿಲ್ಲಾ ಉಸ್ತುವಾರಿ ಸಚಿವರಿಂದ ಯುವನಿಧಿ ಯೋಜನೆಯ ನೋಂದಣಿ ಅಭಿಯಾನದ ಪೋಸ್ಟರ್ ಬಿಡುಗಡೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.18–** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವ ನಿಧಿ ಯೋಜನೆಯ ನೋಂದಣಿ ಅಭಿಯಾನದ ಪೋಸ್ಟರನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬಿಡುಗಡೆ ಮಾಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಶಾಸಕರಾದ ಕರೆಮ್ಮ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಶರಣಗೌಡ ಪಾಟೀಲ ಬಯ್ಯಾಪುರ, ಬಸನಗೌಡ ಬಾದರ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ *2ನೇ ಪುಟಕ್ಕೆ*

## ಜುಲೈ 21 ಕ್ಕೆ ತಾಲೂಕು ಮಟ್ಟದ ಪತ್ರಿಕಾ ದಿನಾಚರಣೆ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.18–** ಪ್ರತಿ ವರ್ಷದಂತೆ ಈ ಭಾರಿಯು ಕೂಡಾ ಪತ್ರಿಕಾ ದಿನಾಚರ 'ಣೆಯ ನ್ನು ದೇವದುರ್ಗ ಶಾಸಕಿ ಕರೆಮ್ಮ ಜಿ ನಾಯಕ, ಉದ್ಘಾಟನೆ ಮಾಡಲಿದ್ದು, ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ದಶರಥ ಸಾವುರ್, ಬಿವಿ ನಾಯಕ ಮಾಜಿ ಸಂಸದ, ತಾಲೂಕು ಮಟ್ಟದ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಕಾರ್ಯಕ್ರಮದ ಪ್ರಸ್ತಾವಿಕೆ ನುಡಿಯನ್ನೂ ಬಸವರಾಜಬ್ಯಾಗವಾಟ್, ಮುಖ್ಯ ಅತಿಥಿಗಳನ್ನು ನಾಗರಾಜ ಪೂಜಾರಿ ಮಾನಸಗಲ್ ಸ್ವಾಗತಿಸಲಿದ್ದಾರೆ ನಿರೂಪಣೆ ಯನ್ನು ಅಮರೇಶ ಚಿಲ್ಕರಾಗಿ, ವಂದನರ್ಪಣೆಯನ್ನು ಗುರುನಾಥ ಇಂಗಳದಾಳ ಮಾಡಲಿದ್ದಾರೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ ತಾಲೂಕು ಅಧ್ಯಕ್ಷ ಬಾಬು ಕರಿಗುಡ್ಡ ತಿಳಿಸಿದರು ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿ ಗೋಷ್ಠಿ *2ನೇ ಪುಟಕ್ಕೆ*

## ಸಿರವಾರ: ನೂತನ ತಹಸೀಲ್ದಾರರಾಗಿ ಅಶೋಕ ಪವರ್ ಅಧಿಕಾರ ಸ್ವೀಕಾರ

**ಯುವ ಮಾರ್ಗ ಸುದ್ದಿ**

**ಸಿರವಾರ, ಜು.18–**ಸಿರವಾರ ತಹಸೀಲ್ದಾರ ಆಗಿದ್ದ ರವಿ ಎಸ್.ಅಂಗಡಿ ಅವರು ಕೊಪ್ಪಳ ಜಿಲ್ಲೆಯ ನಗರಾಭಿವೃದ್ಧಿ ಕೋಶಕ್ಕೆ ವರ್ಗಾವಣೆ ಆಗಿರುವುದರಿಂದ ತೇರವಾದ ಆ ಸ್ಥಾನಕ್ಕೆ ಮಸ್ಕಿಯ ಗ್ರೇಡ್ 2 ತಹಸೀಲ್ದಾರರಾಗಿ ಕಾರ್ಯನಿರ್ವಹಿಸುತ್ತಿದ್ದ ಅಶೋಕ ಪವಾರ ಅವರನ್ನು ಸಿರವಾರ ಗ್ರೇಡ್ 1 ತಹಸೀಲ್ದಾರರಾಗಿ ವರ್ಗಾವಣೆ ಮಾಡಿದ ಹಿನ್ನೆಲೆಯಲ್ಲಿ ಗುರುವಾರ ಅಧಿಕಾರ ಸ್ವೀಕಾರ ಮಾಡಿಕೊಂಡರು.



ನಂತರ ಮಾತನಾಡಿದ ಅಶೋಕ ಪವಾರ ಸಿರವಾರ ನನಗೆ ಹೊಸತು ಅಲ್ಲ, ಇದೇ ಭಾಗದವರು ನಾವು, ನನ್ನ ತಂದೆ ಅತ್ತನೂರು ಗ್ರಾಮದಲ್ಲಿ ಶಿಕ್ಷಕರಾಗಿ, ತಾಯಿ ಸಿರವಾರ ಸಿಡಿಪಿಓ ಕಛೇರಿಯಲ್ಲಿ ಅಂಗನವಾಡಿ ಮೆಲ್ವಿಚಾರಕಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಆದರಿಂದ ಈ ಭಾಗ ನನಗೆ ಚಿರಪರಿಚಿತ. ತಾಲೂಕ ಕೇಂದ್ರವಾಗಿ 12 ವರ್ಷ ಕಳೆದಿದೆ. ಸಿರವಾರ ವ್ಯಾಪ್ತಿ ದೊಡ್ಡದಿದೆ. ಕೆಲವು ಕಡೆ ಸಮಸ್ಯೆಗಳು ಇವೆ. ಎಲ್ಲಾರ ಸಹಕಾರ ಸಲಹೆ ಸೂಚನೆಗಳನ್ನು ಪಡೆದು ಉತ್ತಮ ಸೇವೆ ನೀಡುವೆ ಎಂದರು. ತಹಸೀಲ್ದಾರ ಕಛೇರಿಯ ಸಿಬ್ಬಂದಿಗಳಿಂದ ಹೂ ಗುಚ್ಚ ನೀಡಿ ಸನ್ಮಾನಿಸಿ ಸ್ವಾಗತಿಸಲಾಯಿತು.

## ಸಾರ್ವಜನಿಕ ಗಾರ್ಡನ್ ಅಭಿವದ್ಧಿಗೆ ಮುಂದಾಗಿ ಕರವೇ ಮನವಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.18–** ಪಟ್ಟಣದ ಕೆರೆಯ ದಡದಲ್ಲಿರುವ ಪಬ್ಲಿಕ್ ಗಾರ್ಡನ್ ಅಭಿವದ್ಧಿಗೆ ಮುಂದಾಗಿ ಸಾರ್ವ ಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಒತ್ತಾಯಿಸಿದರು. ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು ಅವರಿಗೆ ಶುಕ್ರವಾರ ಮನವಿ ಸಲ್ಲಿಸಿ, ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಸಾರ್ವಜನಿಕ ಉದ್ಯಾನವನ ನಿರ್ವಹಣೆ ಕೊರತೆಯಿಂದ ಹಾಳಾಗುತ್ತಿದೆ. ಒಳಗಡೆ ಮುಳ್ಳು ಕಂಟಿಗಳು ಬೆಳೆದು ವಿಷಜಂತುಗಳು ಸೇರಿಕೊಂಡಿವೆ. ಪರಿಣಾಮ ವಾಯುವಿ ಹಾರಕ್ಕೆಂದು ಬರುವ ಸಾರ್ವಜನಿಕರು ಭಯದಲ್ಲಿ ಇರು ವಂತಾಗಿದೆ. ಕೂಡಲೇ ಪರಿಶೀಲನೆ ಮಾಡಿ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಆಗ್ರಹಿಸಿದರು.




ಈ ಸಂದರ್ಭದಲ್ಲಿ ಕರವೇ ಅಧ್ಯಕ್ಷ ಆಂಜನೇಯ, ಭೀಮೇಶ್, ಶಿವಪುತ್ರ, ಅಶೋಕ ನಾಯಕ, ವರುಣ ಕುಮಾರ್, ಉಮೇಶ್ ಕರಡಕಲ್, ಸಲೀಂಖಾನ್, ರವಿ ಕುಮಾರ್, ಪ್ರಕಾಶ್ ಸೇರಿ ಇತರರು ಇದ್ದರು.

## ಮೊದಲನೇಯ ಪುಟದಿಂದ

# ರಸಗೊಬ್ಬರವನ್ನು ರೈತರಿಗೆ ಸಮರ್ಪಕವಾಗಿ ವಿತರಿಸಲು ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

**ತನಿಖೆಗೆ ಸೂಚನೆ:** ಬೇರೆ ಬೇರೆ ತಾಲೂಕುಗಳಲ್ಲಿ ಜಲಧಾರೆ ಯೋಜನೆಯ ಕಾಮಗಾರಿಯು ಕಳಪೆಯಾಗಿದೆ ಎಂದು ಶಾಸಕರು ಸಭೆಯಲ್ಲಿ ಬೇಸರ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಶಾಸಕರು ದೂರಿದ ಈ ವಿಷಯವನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಜಲಧಾರೆ ಕಾಮಗಾರಿ ಕಳಪೆಯ ಬಗ್ಗೆ ಮಸ್ಕಿ ಸೇರಿದಂತೆ ವಿವಿಧೆಡೆ ಪರಿಶೀಲನೆ ನಡೆಸಿ ಕಾಮಗಾರಿ ಕಳಪೆ ಎಂದು ಕಂಡುಬಂದಲ್ಲಿ ತಪ್ಪಿತಸ್ಥ ಅಧಿಕಾರಿಗಳನ್ನು ಅಮಾನತು ಶಿಕ್ಷೆಗೆ ಗುರಿಪಡಿಸಲು ವಾರದೊಳಗೆ ಕ್ರಮವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಓ ಅವರಿಗೆ ತಿಳಿಸಿದರು.

ಸಭೆಯಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಶರಣಗೌಡ ಪಾಟೀಲ ಬಯ್ಯಾಪುರ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ಶಫಿವುಲ್ಲಾಖಾನ್ ಮೆಹಬೂಬ, ತಿಮ್ಮಪ್ಪ ಮಲ್ಲಯ್ಯ, ಮೀನಾಕ್ಷಿ ರಾಮಸ್ವಾಮಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ ಯುವನಿಧಿ ಯೋಜನೆಯ ನೋಂದಣಿ ಅಭಿಯಾನದ ಪೋಸ್ಟರ್ ಬಿಡುಗಡೆ

ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ, ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಗ್ ಸೇರಿದಂತೆ ಕೆಡಿಪಿ ನಾಮ ನಿರ್ದೇಶಿತ ಸದಸ್ಯರು ಮತ್ತು ಅಧಿಕಾರಿಗಳು ಇದ್ದರು.

# ಜುಲೈ 21 ಕ್ಕೆ ತಾಲೂಕು ಮಟ್ಟದ ಪತ್ರಿಕಾ ದಿನಾಚರಣೆ

ಯನ್ನುದ್ದೇಶಿಸಿ ಮಾತನಾಡಿ ಶ್ರೀ ವೆಂಕಟೇಶ್ ನಾಯಕ ಫೌಂಡೇಶನ್ ವತಿಯಿಂದ ಕೊಡಮಾಡುವ ತಾಲೂಕು ಉತ್ತಮ ವರದಿಗಾರ ಎಂಬ ಹೆಗ್ಗಳಿಕೆ ಪಡೆದ ಪ್ರಶಸ್ತಿ ದುರ್ಗಸಿರಿ ಪ್ರಶಸ್ತಿ ಯಾಗಿದೆ 2025-26 ನೇ ಸಾಲಿನಪ್ರಶಸ್ತಿಗೆ 4 ಜನ ಆಯ್ಕೆಯಾಗಿದ್ದಾರೆ ನಾಗರಾಜ ಮನ್ನಾಪುರಿ, ಮಹಾಂತೇಶ್ ಹಿರೇಮಠ್, ನಿರಂಜನ್ ಮಸರಕಲ್, ಸಚ್ಚಿದಾನಂದ ಈ ನಾಲ್ಕು ಜನ ಪ್ರಶಸ್ತಿ ಪುರಸ್ಕೃತರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ ಕಾರ್ಯಕ್ರಮವು ಪಟ್ಟಣದ ಖೇಣೆದ ಮುರಿಗೆಪ್ಪ ಪಂಷನ್ ಹಾಲ್ ನಲ್ಲೀ ಜರುಗಲಿದೆ ಎಂದರು ಇದೇ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ನರಸಿಂಗ್ ರಾವ್ ಸರ್ಕಿಲ್, ನಾಗರಾಜ ತೆಲ್ಕರ್, ನಾಗರಾಜ ಪೂಜಾರಿ ಮಾನಸಗಲ್,ಪ್ರಮುಖರು ಉಪಸ್ಥಿತರಿದ್ದರು

# ವಚನ ಸಾಹಿತ್ಯ ಅಕಾಡೆಮಿಕ್ ವಲಯದ ಭಾಗವಾಗಲಿ : ಡಾ. ಮಯೂರ ಪೂಜಾರಿ

**ಕಲಬುರಗಿ,ಜು.18–** ಹನ್ನೆರಡನೇ ಶತಮಾನದಲ್ಲಿ ಶರಣರು ಬರೆದ ವಚನ ಸಾಹಿತ್ಯ ಭಾರತೀಯ ತತ್ವಶಾಸ್ತ್ರ ಪರಂಪರೆಯ ಬಹುದೊಡ್ಡ ಭಾಗವಾಗಿವೆ. ವೈಚಾರಿಕ ಅರಿವು, ನೈತಿಕ ಹೊಣೆಗಾರಿಕೆ ವಚನಗಳ ತಾತ್ವಿಕತೆಯಾಗಿದೆ ಎಂದು ಸಿಯುಕೆ ಶಿಕ್ಷಣಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಮಯೂರ ಪೂಜಾರಿ ಹೇಳಿದರು.

ಕಲಬುರ್ಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಶಿಕ್ಷಣಶಾಸ್ತ್ರ ವಿಭಾಗದಿಂದ ಗುರುವಾರ ಬಸವಕಲ್ಯಾಣದ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ 'ಸಮಕಾಲೀನ ಶೈಕ್ಷಣಿಕ ಸವಾಲು ಮತ್ತು ಸಾಧ್ಯತೆ, ಕುರಿತ ಸಂವಾದ ಸಮಾರಂಭದಲ್ಲಿ ಮಾತನಾಡಿದ ಅವರು, ಉನ್ನತ ಶಿಕ್ಷಣದಲ್ಲಿ ವಚನ ಸಾಹಿತ್ಯ ಮತ್ತು ವಚನಕಾರರ ಅಧ್ಯಯನ ಈ ಕಾಲದ ಅಗತ್ಯ. ಅಕಾಡೆಮಿಕ್ ವಲಯದ ಭಾಗವಾಗುವ ಅಗತ್ಯವಿದೆ ಎಂದರು.

ಬಸವಣ್ಣ, ಅಲ್ಲಮ ಮತ್ತು ಉಳಿದ ಶರಣರ ವಚನಗಳನ್ನು ಕುರಿತು ಉನ್ನತ ಶಿಕ್ಷಣದಲ್ಲಿ ಸಂಶೋಧನೆಯ ಹಾಗೂ ಸಾಮಾಜಿಕ- ಸಾಂಸ್ಕೃತಿಕ ವಿಮರ್ಶೆಯ ಸ್ವರೂಪ ಪಡೆಯುವುದು ಮುಖ್ಯ. ಹಾಗೆಯೇ ಮೌಲ್ಯಗಳನ್ನು ಬೆಳೆಸುವ, ಚಾರಿತ್ರಿಕ ಪ್ರಜ್ಞೆ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣದ ಬೆಳವಣಿಗೆ ನಡೆಯಬೇಕು ಎಂದರು.

ದೆಹಲಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ವಿಕಾಸ ಕುಮಾರ್ ಮಾತನಾಡಿ,ಬಸವಣ್ಣ ಮತ್ತು ಅವರ ಸಮಕಾಲೀನ ವಚನಕಾರರ ಚಾರಿತ್ರಿಕ ಸಂದರ್ಭ ಅನಂತವಾದದ್ದು. ಶರಣರು ಕಟ್ಟಿಕೊಟ್ಟ ತಾತ್ವಿಕ ಚಿಂತನೆ ಅತ್ಯಂತ ವೈಚಾರಿಕ, ಬೌದ್ಧಿಕ ನಿಲುವಿನಿಂದ ಕೂಡಿದೆ. ಉತ್ತರ ಭಾರತದ ಜನರಿಗೆ ಶರಣರ ತತ್ವ ಸಿದ್ಧಾಂತಗಳ ಪರಿಚಯವಿಲ್ಲ. ಹಿಂದಿ, ಬೆಂಗಾಲಿ, ಗುಜರಾತಿ ಸೇರಿ ಭಾರತೀಯ ಬೇರೆ ಬೇರೆ ಭಾಷೆಯಲ್ಲಿ ಕನ್ನಡದ ವಚನಗಳ ತರ್ಜುಮೆ ಅತ್ಯಗತ್ಯ ಎಂದರು.



ಭಾರತದ ಹಲವು ವಿಶ್ವವಿದ್ಯಾಲಯಗಳಲ್ಲಿ ವಚನಗಳ ಅಧ್ಯಯನ ನಡೆಯುವ ಅಗತ್ಯವಿದೆ. ಕನ್ನಡೇತರ ಸಾಹಿತ್ಯದ ಓದುಗರಿಗೆ, ಬರಹಗಾರರಿಗೆ ವಚನ ಸಾಹಿತ್ಯ ತಲುಪಬೇಕಾಗಿದೆ ಎಂದರು.

ಸಿಯುಕೆ ಅರ್ಥಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಡಾ. ಮಲ್ಲೇಶ್ ಉಮ್ಮಲ್ಲಾ ಮಾತನಾಡಿ, ಶರಣರ ಆರ್ಥಿಕ ಹಾಗೂ ರಾಜಕೀಯ ಚಿಂತನೆ ಅಕಾಡೆಮಿಕ್ ಚರ್ಚೆಯ ಭಾಗವಾಗಬೇಕು. ಇಷ್ಟೊಂದು ವಿಶಿಷ್ಟ ಮತ್ತು ವೈವಿಧ್ಯಮಯ ಬದುಕಿನ ಚಿಂತನೆ ಕಟ್ಟಿಕೊಟ್ಟ ಸಾಹಿತ್ಯ ಭಾರತೀಯ ಸಂದರ್ಭದಲ್ಲಿ ಸಿಗದು. ದೇಶದ ಎಲ್ಲ ವಿಶ್ವವಿದ್ಯಾಲಯದ ಆವರಣಗಳಲ್ಲಿ ವಚನ ಸಾಹಿತ್ಯದ ಚರ್ಚೆಯಾಗಬೇಕು ಎಂದರು.

ಸಿಯುಕೆ ಹಳೆಯ ವಿದ್ಯಾರ್ಥಿ ಹಾಗೂ ಬಸವಕಲ್ಯಾಣದ ಉಪನ್ಯಾಸಕ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಸಾಮಾಜಿಕ, ಆರ್ಥಿಕ ಹಾಗೂ ಸಾಂಸ್ಕೃತಿಕ ಸಂಗತಿಗಳ ಬಗೆಗೆ ಹೆಚ್ಚು ಗಂಭೀರವಾದ ಚಿಂತನೆ ಮಾಡಿದ ವಚನಗಳು ಜಗತ್ತಿನ ಎಲ್ಲ ಅಕಾಡೆಮಿಕ್ ವಲಯಗಳಲ್ಲಿ ಅನುಸಂಧಾನಕ್ಕೆ ಒಳಗಾಗಬೇಕು. ವಿವಿಗಳು ವಚನ ಸಾಹಿತ್ಯದ ಬಹುಶಿಸ್ತೀಯ ಅಧ್ಯಯನಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಆಶಿಸಿದರು.

# ನೈರುತ್ಯ ಮುಂಗಾರು ಚೇತರಿಕೆ, ರಾಜ್ಯದ ಹಲವೆಡೆ ಮಳೆ

**ಬೆಂಗಳೂರು,ಜು.18–** ನೈರುತ್ಯ ಮುಂಗಾರು ಚೇತರಿಕೆ ಕಂಡಿದ್ದು, ರಾಜ್ಯದ ಹಲವೆಡೆ ಮಳೆಯಾಗಿದೆ. ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದ್ದರೆ, ಒಳನಾಡಿನಲ್ಲಿ ಚದುರಿದಂತೆ ಅಲ್ಲಲ್ಲಿ ಹಗುರದಿಂದ ಸಾಧಾರಣ ಮಳೆಯಾಗಿದೆ.

ಉತ್ತರಕನ್ನಡ, ಕೋಲಾರ, ದಕ್ಷಿಣ ಕನ್ನಡ, ಉಡುಪಿ, ಕೊಡಗು ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದ್ದರೆ ವಿಜಯಪುರ, ಯಾದಗಿರಿ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸಾಧಾರಣ ಪ್ರಮಾಣದ ಮಳೆಯಾಗಿದೆ.ಬೆಳಗಾವಿ, ಬಾಗಲಕೋಟೆ, ಕಲಬುರಗಿ, ಗದಗ, ಕೊಪ್ಪಳ, ಚಿಕ್ಕಮಗಳೂರು, ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ, ಮೈಸೂರು, ಧಾರವಾಡ ಸೇರಿದಂತೆ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಕೆಲವೆಡೆ ಚದುರಿದಂತೆ ಮಳೆಯಾಗಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಒಣಹವೆ ಕಂಡುಬಂದಿದ್ದು, ವಿಜಯಪುರ ಜಿಲ್ಲೆಯ ಕೊಲ್ಹಾರ ತಾಲ್ಲೂಕಿನ ರೋಣಿಹಾಳ್ ಗ್ರಾಮಪಂಚಾಯಿತಿಯಲ್ಲಿ 138 ಮಿ.ಮೀ.ನಷ್ಟು ಅಧಿಕ ಪ್ರಮಾಣದ ಮಳೆ ಬಿದ್ದಿದೆ.

ಅರಬ್ಬಿಸಮುದ್ರದಲ್ಲಿ ಉಂಟಾಗಿರುವ ಟ್ರಫ್‌ನಿಂದಾಗಿ ರಾಜ್ಯದಲ್ಲಿ ಮೋಡ ಕವಿದ ವಾತಾವರಣ ಉಂಟಾಗಿದ್ದು, ಆಗಾಗ್ಗೆ ಬಲವಾದ ಶೀತಗಾಳಿ ಬೀಸುತ್ತಿದೆ. ರಾಜ್ಯಾದ್ಯಂತ ಮಳೆಯ ಪ್ರಮಾಣ ಹೆಚ್ಚಾಗುವ ಮುನ್ಸೂಚನೆಗಳಿದ್ದು, ಹವಾಮಾನ ಇಲಾಖೆ ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಭಾರೀ ಮಳೆ ಮುನ್ಸೂಚನೆ ನೀಡಿದೆ.

ಕೊಡಗು, ದಕ್ಷಿಣ ಕನ್ನಡ, ಉತ್ತರಕನ್ನಡ, ಉಡುಪಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗುತ್ತಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಚಿಕ್ಕಮಗಳೂರು, ಹಾಸನ, ಮೈಸೂರು, ಶಿವಮೊಗ್ಗ, ಚಾಮರಾಜನಗರ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದರೆ, ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ, ತುಮಕೂರು ಜಿಲ್ಲೆಗಳಲ್ಲಿ ಎಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕೋಲಾರ, ದಾವಣಗೆರೆ, ಹಾವೇರಿ, ಗದಗ, ಧಾರವಾಡ, ಚಿತ್ರದುರ್ಗ, ಬೆಳಗಾವಿ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುತ್ತಿದೆ. ಕಾಫಿನಾಡು ಚಿಕ್ಕಮಗಳೂರಿನಲ್ಲಿ ನಿರಂತರ ಮಳೆಯಾಗುತ್ತಿದ್ದು, ಶೃಂಗೇರಿ, ಹೊರನಾಡು, ಎನ್.ಆರ್.ಪುರ, ಕೊಪ್ಪ, ಜೈಪುರ ಸೇರಿದಂತೆ ಮತ್ತಿತರೆಡೆ ಮಳೆ ಮುಂದುವರೆದಿದ್ದು, ನೀರಿನ ಮಟ್ಟ ಕಡಿಮೆಯಾಗಿದ್ದ ಹಳ್ಳಕೊಳ್ಳಗಳು ಮತ್ತೆ ಮೈದುಂಬಿ ಹರಿಯುತ್ತಿವೆ.

ರಾಜಧಾನಿ ಬೆಂಗಳೂರಿನಲ್ಲೂ ಸಹ ನಿನ್ನೆ ಸಂಜೆ ಸಾಧಾರಣ ಮಳೆ ಸುರಿದಿದ್ದು, ಮೋಡ ಕವಿದ ವಾತಾವರಣ ಮುಂದುವರೆದಿದೆ. ಶೀತಗಾಳಿ ಬೀಸುತ್ತಿದೆ. ಸಂಜೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ರಾಜ್ಯದ ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಅಲ್ಲಲ್ಲಿ ಚದುರಿದಂತೆ ಮಳೆಯಾಗುವ ಸಾಧ್ಯತೆಗಳಿವೆ.

# ಧರ್ಮಸ್ಥಳ ಪ್ರಕರಣ: ಅಗತ್ಯ ಬಿದ್ದರೆ ಎಸ್‌ಐಟಿ

**ಬೆಂಗಳೂರು, ಜು. 18–** ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಕೊಲೆ, ಶವಗಳನ್ನು ಹೂಳಿರುವ ಪ್ರಕರಣದ ಬಗ್ಗೆ ಸದ್ಯಕ್ಕೆ ಎಸ್‌ಐಟಿ ರಚನೆ ಮಾಡಲ್ಲ. ಪೊಲೀಸರು ತನಿಖೆ ನಡೆಸಿ ವರದಿ ನೀಡಿದ ನಂತರ ಅಗತ್ಯವಿದ್ದರೆ ಎಸ್‌ಐಟಿ ರಚಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು.



ಮೈಸೂರಿನಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಅಪರಿಚಿತ ಶವಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಯಾವುದೇ ಒತ್ತಡಕ್ಕೆ ಬಗ್ಗಲ್ಲ, ಮಣಿಯಲ್ಲ. ಕಾನೂನಿನ ಪ್ರಕಾರ ಕ್ರಮ ಆಗುತ್ತದೆ ಎಂದರು. ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಗೋಪಾಲಗೌಡ ಅವರು ಧರ್ಮಸ್ಥಳದಲ್ಲಿ ನಡೆದಿರುವ ಕೊಲೆ, ಅತ್ಯಾಚಾರ, ಹೆಣಗಳ ಹೂಳಿರುವ ಪ್ರಕರಣದ ಬಗ್ಗೆ ಎಸ್‌ಐಟಿ ರಚನೆಗೆ ಒತ್ತಾಯಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು, ನಿವೃತ್ತ ನ್ಯಾ, ಗೋಪಾಲಗೌಡ ಅವರು ಹೇಳಿರುವ ಪರವಾಗಿ ಆಗಲೀ, ವಿರುದ್ಧವಾಗಿ ಆಗಲೀ ಇಲ್ಲ. ಕಾನೂನಿನಂತೆ ಕ್ರಮ ಆಗುತ್ತದೆ ಎಂದರು ಎತ್ತು ಈಯಿತು, ಕೊಟ್ಟಿಗೆ ಕಟ್ಟು ಎಂಬಂತೆ ಸರ್ಕಾರ ನಡೆದುಕೊಳ್ಳಲು ಆಗಲ್ಲ. ಎತ್ತು ಈಯಲ್ಲ, ಪೊಲೀಸರು ಈಗ ತನಿಖೆ ನಡೆಸಿದ್ದಾರೆ .ಅವರು ವರದಿ ಕೊಡಲಿ, ವರದಿ ಬಂದ ಮೇಲೆ ಅಗತ್ಯವಿದ್ದರೆ ಎಸ್‌ಐಟಿ ರಚನೆ ಮಾಡುತ್ತೇವೆ ಎಂದರು. ಧರ್ಮಸ್ಥಳದ ಪ್ರಕರಣದ ಸಂಬಂಧ ಸರ್ಕಾರದ ಮೇಲೆ ಯಾರಾದರೂ ಒತ್ತಡ ಹೇರಿದ್ದಾರಾ ಎಂಬ ಪ್ರಶ್ನೆಗೆ, ಯಾರೂ ಒತ್ತಡ ಹೇರಿಲ್ಲ. ಹೇರಿದ್ದರೂ ನಾವು ಬಗ್ಗಲ್ಲ ಅದಕ್ಕೆಲ್ಲಾ ಕೇರ್ ಮಾಡಲ್ಲ ಕಾನೂನಿನಂತೆ ಕ್ರಮ ಕೈಗೊಳ್ಳುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

# ಬೆಂಗಳೂರಿಗೆ ದತ್ತಪ್ಪ ಸಾಗನೂರ್ ವರ್ಗಾವಣೆಯಿಂದ ಕಲಬುರ್ಗಿಯವರ ಕೆಲಸ ಮತ್ತಷ್ಟು ಸುಗಮ: ಶಾಸಕ ಅಲ್ಲಮಪ್ರಭು ಪಾಟೀಲ್

**ಕಲಬುರ್ಗಿ,ಜು.18–**ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ್ ಅವರು ಬೆಂಗಳೂರಿನ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟರ್ ಆಗಿ ವರ್ಗಾವಣೆಗೊಂಡಿದ್ದು, ಜಿಲ್ಲೆಯ ಜನರ ಕೆಲಸ ಕಾರ್ಯಗಳು ಇದರಿಂದ ಮತ್ತಷ್ಟು ಸುಗಮವಾಗಲಿವೆ ಎಂದು ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಹೇಳಿದರು.



ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸುವರ್ಣ ಸಭಾ ಭವನದಲ್ಲಿ ಗುರುವಾರ ಜಿಲ್ಲಾ ಕಲಾವಿದರ ಬಳಗ ಹಮ್ಮಿಕೊಂಡಿದ್ದ ದತ್ತಪ್ಪ ಸಾಗನೂರ್ ಅವರ ಬೀಳ್ಕೊಡುಗೆ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯವರೇ ಆದ, ಅದೂ ನನ್ನ ನೆಲೋಗಿ ಹತ್ತಿರದ ಅಫಜಲಪುರ ತಾಲ್ಲೂಕಿನ ಸಾಗನೂರಿನ ದತ್ತಪ್ಪ ಸಾಗನೂರ್ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾಗಿ ಕಲಾವಿದರ ಹಿತವನ್ನು ರಕ್ಷಿಸಿದ್ದಾರೆ. ಈಗ ಅವರ ಸೇವೆಯು ಬೆಂಗಳೂರಿಗೆ ಅಗತ್ಯ ಇರುವುದನ್ನು ಮನಗಂಡು ಬೆಂಗಳೂರಿಗೆ ವರ್ಗಾವಣೆ ಮಾಡಿದ್ದಾರೆ. ಅವರು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುವುದರಿಂದ ನಮ್ಮ ಕೆಲಸಗಳು ಎಲ್ಲವೂ ಕೈಗೂಡಲಿವೆ ಎಂದರು.

ನಮ್ಮ ಜಿಲ್ಲೆಯವರೇ ಆಗಿದ್ದರಿಂದ ದತ್ತಪ್ಪ ಸಾಗನೂರ್ ಅವರು ಉತ್ತಮ ಸೇವೆ ಸಲ್ಲಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಬೆಂಗಳೂರಿನಲ್ಲಿಯೂ ಸಹ ಇನ್ನೂ ಉತ್ತಮ ಸೇವೆ ಸಲ್ಲಿಸಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾಗಿದ್ದ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ. ಸದಾನಂದ ಪೆರ್ಲ ಅವರು ಮಾತನಾಡಿ, ಸರ್ಕಾರಿ ಉದ್ಯೋಗಿಯಾಗಿ ಸೇವಾ ತತ್ಪರತೆಯಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿದರೆ ಜನ ಮೆಚ್ಚುಗೆ ಪಡೆಯಲು ಸಾಧ್ಯ. ದತ್ತಪ್ಪ ಸಾಗನೂರು ಜಿಲ್ಲೆಯ ಸಾಂಸ್ಕೃತಿಕ ಲೋಕದ ಪ್ರತಿಭೆಗಳನ್ನು ಗುರುತಿಸಿ ಬೆಳಕಿಗೆ ತಂದ ಕೀರ್ತಿಗೆ ಪಾತ್ರರಾದವರು ಎಂದರು.

ಸರ್ಕಾರಿ ಉದ್ಯೋಗದಲ್ಲಿ ಕೇವಲ ವೇತನಕ್ಕಾಗಿ ದುಡಿಯದೇ ನಾಡಿನ ಸಾಂಸ್ಕೃತಿಕ ಬೆಳವಣಿಗೆಗೆ ಪ್ರಾಮಾಣಿಕವಾಗಿ ದುಡಿದಾಗ ಸಾರ್ವಜನಿಕರಿಂದ ಮುಕ್ತ ಪ್ರಶಂಸೆಗೆ ಪಾತ್ರರಾಗಿ ವರ್ಗಾವಣೆಯಲ್ಲೂ ಪ್ರೀತಿ ಮತ್ತು ಔದಾರ್ಯವನ್ನು ಪ್ರಕಟಿಸಿ ನೀಡುವ ಅಭಿನಂದನೆ ನಿಜಕ್ಕೂ ಅರ್ಥಪೂರ್ಣ ಮತ್ತು ಜನರ ವಿಶ್ವಾಸ ಗೆದ್ದ ಪ್ರತೀಕ ಎಂದು ಹೇಳಿದ ಅವರು, ದತ್ತಪ್ಪ ಸಾಗನೂರು ಉನ್ನತ ಸ್ಥಾನದೊಂದಿಗೆ ಮತ್ತೆ ಕಲ್ಯಾಣ ಕರ್ನಾಟಕದಲ್ಲಿ ಸೇವೆ ಸಲ್ಲಿಸುವಂತಾಗಲಿ ಎಂದು ಶುಭ ಹಾರೈಸಿದರು. ಹಿರಿಯ ಪತ್ರಕರ್ತ ಬಸವರಾಜ್ ಅ. ಚಿನಿವಾರ್ ಅವರು ಮಾತನಾಡಿ, ಅಫಜಲಪುರ ತಾಲ್ಲೂಕಿನ ಸುಕ್ಷೇತ್ರ ದೇವಲ್ ಗಾಣಗಾಪುರದ ತ್ರಿವೇಣಿ ಸಂಗಮ ಪ್ರದೇಶದಿಂದ ಬಂದಿರುವ ದತ್ತಪ್ಪ ಸಾಗನೂರ್ ಅವರು ಸ್ಥಳೀಯರೇ ಆಗಿರುವುದರಿಂದ ಕಲಾವಿದರಿಗೆ, ಅದರಲ್ಲೂ ಜಾನಪದ ಕಲಾವಿದರಿಗೆ ಹೆಚ್ಚು ಆದ್ಯತೆ ನೀಡಿದರು. ಈಗ ಅವರ ವರ್ಗಾವಣೆಯಿಂದ ಅವರ ಎಲ್ಲ ಕಲಾವಿದರು ಸ್ವಲ್ಪ ಆತಂಕಕ್ಕೆ ಒಳಗಾಗಿದ್ದಾರೆ. ಆದಾಗ್ಯೂ, ಅವರು ಮುಂಬಡ್ತಿ ಪಡೆದು ಮತ್ತೆ ಮರಳಿ ಜಿಲ್ಲೆಗೆ ಬರುವರೆಂಬ ವಿಶ್ವಾಸವನ್ನು ಸಹ ಹೊಂದಿದ್ದಾರೆ. ಅವರ ಆಶಯ ಈಡೇರಲಿ ಎಂದರು.

ಮಹಾನಗರ ಪಾಲಿಕೆಯಲ್ಲಿನ ಸದಸ್ಯರು ಕನ್ನಡವನ್ನು ಬಳಕೆ ಮಾಡುತ್ತಿಲ್ಲ. ಬದಲಾಗಿ ಉರ್ದು, ಹಿಂದಿ ಬಳಸುತ್ತಿದ್ದಾರೆ. ಕನ್ನಡ ಮಾತನಾಡುವ ಪಾಲಿಕೆಯ ಸದಸ್ಯರೂ ಸಹ ಹಿಂದಿಯಲ್ಲಿಯೇ ಮಾತನಾಡುತ್ತಿದ್ದಾರೆ. ಹೀಗಾಗಿ ಪಾಲಿಕೆಯ ಸದಸ್ಯರು ಕನ್ನಡ ಬಾರದೇ ಇದ್ದರೆ ಅವರಿಗೆ ಕಲಿಸುವಂತಹ ಕಾರ್ಯವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಾಡಬೇಕು ಎಂದು ಅವರು ಇದೇ ಸಂದರ್ಭದಲ್ಲಿ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ್ ಪಾಟೀಲ್ ತೇಗಲತಿಪ್ಪಿ ಅವರು ಮಾತನಾಡಿ, ಜಿಲ್ಲೆಯ ಸಾಹಿತ್ಯ ಮತ್ತು ಸಂಸ್ಕೃತಿಗೆ ದತ್ತಪ್ಪ ಸಾಗನೂರ್ ಅವರು ಶ್ಲಾಘನೀಯ ಸೇವೆಯನ್ನು ಸಲ್ಲಿಸಿದ್ದಾರೆ. ಕಲಾವಿದರ ಹಿತಚಿಂತಕರಾಗಿದ್ದಾರೆ. ಅವರ ವರ್ಗಾವಣೆ ಕೇವಲ ತಾತ್ಕಾಲಿಕ. ಶೀಘ್ರವೇ ಮತ್ತೆ ಜಿಲ್ಲೆಗೆ ಉಪ ನಿರ್ದೇಶಕರಾಗಿ ಬರಲಿದ್ದಾರೆ ಎಂದರು. ಸನ್ಮಾನ ಸ್ವೀಕರಿಸಿದ ದತ್ತಪ್ಪ ಸಾಗನೂರ್ ಅವರು ಮಾತನಾಡಿ, ನನಗೆ ಬೆಂಗಳೂರಿಗೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟರ್ ಆಗಿ ವರ್ಗಾವಣೆ ಆದೇಶ ಬಂದಿದೆ. ನನಗೆ ಅಧಿಕಾರ ವಹಿಸಿಕೊಳ್ಳಲು ನಿರಂತರ ದೂರವಾಣಿ ಕರೆಗಳು ಬರುತ್ತಿವೆ. ನಾನು ಹದಿನೈದು ದಿನಗಳ ಕಾಲ ರಜೆಯಲ್ಲಿದ್ದೆ. ಇನ್ನು ಮುಂದೆ ಅಧಿಕಾರ ತೆಗೆದುಕೊಳ್ಳುವೆ. ಜಿಲ್ಲೆಯ ಕಲಾವಿದರು, ಜನರು ನನಗೆ ತೋರಿಸಿದ ಪ್ರೀತಿ ಮತ್ತು ವಿಶ್ವಾಸ ಮರೆಯಲಾಗದು ಎಂದರು.

ನಾನು ಅತ್ಯಂತ ಬಡ ಕುಟುಂಬದಿಂದ ಬಂದವನಿದ್ದೇನೆ. ನಾನು ಕಲಿಯುವ ಸಂದರ್ಭದಲ್ಲಿಯೂ ಸಹ ನನ್ನೂರಿನಿಂದ ಬಸ್ ಸೌಲಭ್ಯ ಇರಲಿಲ್ಲ. 8 ಕಿ.ಮೀ. ನಡೆದುಕೊಂಡು ಹಸರಗುಂಡಗಿ ಗ್ರಾಮಕ್ಕೆ ಬರಬೇಕಾಗುತ್ತಿತ್ತು. ನಾವು ಕಲಬುರ್ಗಿಗೆ ಬಂದು ಮರಳಿ ಹೋದಾಗ ರಾತ್ರಿಯಾದಾಗ ಹಸರಗುಂಡಗಿಯಲ್ಲಿಯೇ ಉಳಿಯಬೇಕಿತ್ತು. ಇಲ್ಲವೇ ರಾತ್ರಿ ಕಾಲ್ನಡಿಗೆಯಲ್ಲಿಯೇ ತೆರಳಬೇಕಿತ್ತು. ಆದಾಗ್ಯೂ, ಅಂತಹ ಕಠಿಣ ಸಂದರ್ಭದಲ್ಲೂ ಸಹ ನಾನು ಕಲಿತು ನೌಕರಿಗೆ 10ರೂ.ಗಳ ಶುಲ್ಕ ಭರಿಸಿ ಅರ್ಜಿ ಹಾಕಿದಾಗ ನನಗೆ ನೇಮಕಾತಿ ಆದೇಶದ ಹಿನ್ನೆಲೆಯಲ್ಲಿ ಪಿಎಐ ಅವರು ನಮ್ಮೂರಿಗೆ ಬಂದಾಗ ನನ್ನೂರಿನ ಜನರು ನನ್ನ ಕುರಿತು ಎಲ್ಲ ವಿವರಗಳನ್ನು ಹೇಳಿದಾಗ ನನ್ನ ಪರವಾಗಿ ವರದಿಯನ್ನು ಸಿದ್ಧಪಡಿಸಿದರು. ಈಗ ಇದೇ ಹುದ್ದೆಗೆ 30 ಲಕ್ಷ ರೂ.ಗಳನ್ನು ಖರ್ಚು ಮಾಡಿದರೂ ಸಹ ಸಿಗುವುದಿಲ್ಲ. ಇದು ನನಗೆ ಸಿಕ್ಕ ಅಪೂರ್ವ ಅವಕಾಶವಾಗಿದೆ ಎಂದರು. ಅಧಿಕಾರ ಇದ್ದಾಗ ಪರೋಪಕಾರಿ ಸೇವೆ ಮಾಡಬೇಕು. ಉಪಕಾರ ಮಾಡಿದವರಿಗೆ ಖಂಡಿತ ಒಳ್ಳೆಯದು ಆಗುತ್ತದೆ. ನಾನು ಜಿಲ್ಲೆಯ 200 ಸಂಘ, ಸಂಸ್ಥೆಗಳಿಗೆ ಅನುದಾನ ಕೊಟ್ಟೆ. ಇಡೀ ರಾಜ್ಯದಲ್ಲಿ ಅತೀ ಹೆಚ್ಚು ಸಂಘ, ಸಂಸ್ಥೆಗಳಿಗೆ ಅನುದಾನ ಕೊಟ್ಟ ಎರಡನೇ ಜಿಲ್ಲೆ ಕಲಬುರ್ಗಿ ಆಗಿತ್ತು. ಎರಡು ಕೋಟಿ ರೂ.ಗಳ ಅನುದಾನ ನಾನು ಆಗ ನೀಡಿದೆ ಎಂದು ನೆನಪಿಸಿಕೊಂಡ ಅವರು, ಬಾಲ್ಯದ ಓದಿನಲ್ಲಿ ಚಿಕ್ಕಪ್ಪ ಓದುವ ಕುರಿತು ಕಾಳಜಿ ವಹಿಸಿದ್ದನ್ನೂ ಸಹ ಸ್ಮರಿಸಿಕೊಂಡರು.

ಇದೇ ಸಂದರ್ಭದಲ್ಲಿ ದತ್ತಪ್ಪ ಸಾಗನೂರ್ ಮತ್ತು ಲಲಿತಾ ಡಿ. ಸಾಗನೂರ್ ದಂಪತಿಗೆ ಶಾಲು ಹೊದಿಸಿ, ಹೂಮಾಲೆ ಹಾಕಿ, ಚಿನ್ನದುಂಗುರ ತೊಡಿಸಿ ಕಲಾವಿದರ ಬಳಗವು ಸನ್ಮಾನಿಸಿತು. ಮುಖ್ಯ ಅತಿಥಿಗಳಾಗಿ ವೇದಿಕೆಯ ಮೇಲೆ ಖ್ಯಾತ ಉದ್ಯಮಿ ಚಂದ್ರಶೇಖರ್ ಎ. ಮಡಿವಾಳ್, ಖ್ಯಾತ ಚಿತ್ರಕಲಾವಿದೆ ಮೀನಾಕ್ಷಿ ಅಂಬಯ್ಯ ಗುತ್ತೇದಾರ್ ಅವರು ಉಪಸ್ಥಿತರಿದ್ದರು. ಆರಂಭದಲ್ಲಿ ಶ್ರೀಧರ್ ಹೊಸಮನಿ ಅವರು ಪ್ರಾರ್ಥನಾಗೀತೆ ಹಾಡಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ್ ಬಡಿಗೇರ್ ಅವರು ಸ್ವಾಗತಿಸಿದರು. ಎಂ.ಎನ್. ಸುಗಂಧಿ ಅವರು ದತ್ತಪ್ಪ ಸಾಗನೂರ್ ಅವರ ಕುರಿತು ಸ್ವರಚಿತ ಕಾವ್ಯ ವಾಚಿಸಿದರು. ಬಂಡಯ್ಯ ಶಾಸ್ತ್ರಿಗಳು ಸುಂಟನೂರು ಅವರು ಕಾರ್ಯಕ್ರಮ ನಿರೂಪಿಸಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಲಾವಿದ ಬಾಬುರಾವ್ ಕೋಬಾಳ್, ದತ್ತರಾಜ್ ಕಲಶೆಟ್ಟಿ, ಬಸಯ್ಯ ಗುತ್ತೇದಾರ್, ಸೈದಪ್ಪ ಚೌಡಾಪೂರ್, ನಾಗಲಿಂಗಯ್ಯ ಸ್ಥಾವರಮಠ್, ಶಿವರುದ್ರ ಗೌಡಗಾಂವ್, ಶಿವಶಂಕರ ಬಿರಾದಾರ್, ಅಣ್ಣಾರಾವ್ ಮತ್ತಿಮೂಡ್, ಮಹೇಶಕುಮಾರ್ ಬಡಿಗೇರ, ರವೀಂದ್ರ ಕುಲಕರ್ಣಿ, ಬೋರಮ್ಮ ಹೂಗಾರ, ಇಸ್ಮಾಯಿಲ್ ಲದಾಫ್, ಶಿವಕುಮಾರ್ ಜಾಲಹಳ್ಳಿ, ಸಿದ್ಧಾರ್ಥ ಚಿಮ್ಮಯಿದಲಾಯಿ, ವಿಜಯಲಕ್ಷ್ಮೀ ಕೆಂಗನಾಳ್, ಚೆನ್ನಮ್ಮ ಯಾದವ್, ಕಲಾವತಿ, ಜಗದೀಶ್ ಹೂಗಾರ ದೇಸಾಯಿ ಕಲ್ಲೂರ್, ಜ್ಯೋತಿ ಹಂಚಾಟೆ, ಕಲ್ಪನಾ ಮಿನುಗುತಾರೆ,ಬಲ ಭೀಮ್ ನೆಲೋಗಿ, ಶಿವಕುಮಾರ್ ಬೇಡಜುರಗಿ, ರೇವಣಯ್ಯ ಸ್ವಾಮಿ ಸುಂಟನೂರ್, ಮೌನೇಶ್ ಪಂಚಾಳ್, ಶ್ರೀಮತಿ ನೀಲಮ್ಮ ಮಹಾಗಾಂವ,ಆಶಾ ರಾಠೋಡ್, ಶಾಂತ ಲಿಂಗಯ್ಯ ಮಠಪತಿ, ಬಿದ ನೂರ್, ಸಿದ್ದಾರೂಢ ಅವರಳ್ಳಿ, ಸೂರ್ಯ ಕಾಂತ್ ಶಿವಶರಣ ಬಡದಾಳ್, ದಾವಪ್ಪ ಇಟಗಿ, ಗುರುಮೂರ್ತಿ ಅಂಕಲಗಿ, ಕ ಸಾಹಿತಿಗಳು, ಕವಿಗಳು ಮುಂತಾದವರು ಪಾಲ್ಗೊಂಡಿದ್ದರು.

ಯುವ ಮಾರ್ಗ



# ಹಿಂದೂ, ಬೌದ್ಧ, ಸಿಖ್ ಬಿಟ್ಟು ಅನ್ಯ ಧರ್ಮೀಯರ ಎಸ್‌ಸಿ ಪ್ರಮಾಣ ಪತ್ರ ರದ್ದು : ಫಡ್ನವಿಸ್

**ಮುಂಬೈ, ಜು.18–** ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಹಿಂದೂ, ಬೌದ್ಧ ಮತ್ತು ಸಿಖ್ ಧರ್ಮವನ್ನು ಹೊರತುಪಡಿಸಿ ಬೇರೆ ಧರ್ಮಕ್ಕೆ ಸೇರಿದ ವ್ಯಕ್ತಿಯೊಬ್ಬರು ಪರಿಶಿಷ್ಟ ಜಾತಿ ಪ್ರಮಾಣಪತ್ರವನ್ನು ವಂಚನೆಯಿಂದ ಪಡೆದಿದ್ದರೆ, ಅದನ್ನು ರದ್ದುಗೊಳಿಸಲಾಗುವುದು ಎಂದು ಹೇಳಿದ್ದಾರೆ.

ಸರ್ಕಾರಿ ಉದ್ಯೋಗಗಳಂತಹ ಮೀಸಲಾತಿ ಸೌಲಭ್ಯಗಳನ್ನು ಪಡೆದಿದ್ದರೆ ಅಂತಹ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಅಂತಹ ವ್ಯಕ್ತಿ ವಂಚನೆಯಿಂದ ಪಡೆದ ಎಸ್‌ಸಿ ಪ್ರಮಾಣಪತ್ರವನ್ನು ಬಳಸಿಕೊಂಡು ಚುನಾವಣೆಯಲ್ಲಿ ಗೆದ್ದಿದ್ದರೆ, ಅವರ ಆಯ್ಕೆಯನ್ನು ಅನೂರ್ಜಿತವೆಂದು ಘೋಷಿಸಲಾಗುತ್ತದೆ ಎಂದು ಫಡ್ನವೀಸ್ ವಿಧಾನ ಪರಿಷತ್ತಿನಲ್ಲಿ ಭರವಸೆ ನೀಡಿದ್ದಾರೆ.

ಗಮನ ಸೆಳೆಯುವ ನಿರ್ಣಯಕ್ಕೆ ಉತ್ತರಿಸುತ್ತಾ, ಬಲವಂತ ಮತ್ತು ವಂಚನೆಯ ಮೂಲಕ ಧಾರ್ಮಿಕ ಮತಾಂತರದ ಪ್ರಕರಣಗಳನ್ನು ಎದುರಿಸಲು ರಾಜ್ಯ ಸರ್ಕಾರ ಬಲವಾದ ನಿಬಂಧನೆಗಳನ್ನು ತರಲು ಉದ್ದೇಶಿಸಿದೆ ಎಂದು ಹೇಳಿದರು.

ಅಮಿತ್ ಗೋರ್ಖೆ (ಬಿಜೆಪಿ) ಅವರು ಕ್ರಿಪ್ಟೋ ಕ್ರಿಶ್ಚಿಯನ್ನರು ಧರ್ಮದ ಸ್ವಾತಂತ್ರ್ಯವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಮತ್ತು ಕೆಲವು ಜನರು ಇತರ ಧರ್ಮಗಳನ್ನು ಪ್ರತಿಪಾದಿಸುವಾಗ ಎಸ್‌ಸಿ ವರ್ಗದ ಅಡಿಯಲ್ಲಿ ಮೀಸಲಾತಿಯಿಂದ ಪ್ರಯೋಜನ ಪಡೆಯುತ್ತಾರೆ ಎಂದು ಹೇಳಿಕೊಂಡಿದ್ದರು. ಕ್ರಿಪ್ಟೋ ಕ್ರಿಶ್ಚಿಯನ್ನರು ಎಂಬುದು ಕಾಗದದ ಮೇಲೆ ಬೇರೆ ಧರ್ಮಕ್ಕೆ ಸೇರಿದ ಕ್ರಿಶ್ಚಿಯನ್ ಧರ್ಮವನ್ನು ವಿವೇಚನೆಯಿಂದ ಅನುಸರಿಸುವ ಜನರಿಗೆ ಸ್ಪಷ್ಟ ಉಲ್ಲೇಖವಾಗಿದೆ.ಮೇಲ್ನೋಟಕ್ಕೆ ಅವರು ಎಸ್‌ಸಿ ಸಮುದಾಯಕ್ಕೆ ಸೇರಿದವರಾಗಿದ್ದು, ಸರ್ಕಾರಿ ಉದ್ಯೋಗಗಳಂತೆ ಮೀಸಲಾತಿ ಸೌಲಭ್ಯಗಳನ್ನು ಪಡೆಯುತ್ತಾರೆ ಎಂದು ಅವರು ಹೇಳಿದ್ದರು.ನವೆಂಬರ್ 26, 2024 ರಂದು ಸುಪ್ರಿಂ ಕೋರ್ಟ್ ನೀಡಿದ ತೀರ್ಪಿನಲ್ಲಿ, ಪರಿಶಿಷ್ಟ ಜಾತಿ ವರ್ಗದ ಮೀಸಲಾತಿಯನ್ನು ಹಿಂದೂಗಳು, ಬೌದ್ಧರು ಮತ್ತು ಸಿಖ್ಖರು ಮಾತ್ರ ಪಡೆಯಬಹುದು, ಇತರ ಧರ್ಮಗಳಿಗೆ ಸೇರಿದವರು ಅಲ್ಲ ಎಂದು ಸ್ಪಷ್ಟಪಡಿಸಿದೆ ಎಂದು ಫಡ್ನವೀಸ್ ಹೇಳಿದರು.

ಹಿಂದೂ ಧರ್ಮ, ಬೌದ್ಧ ಧರ್ಮ ಮತ್ತು ಸಿಖ್ ಧರ್ಮವನ್ನು ಹೊರತುಪಡಿಸಿ ಬೇರೆ ಧರ್ಮಗಳ ಯಾರಾದರೂ ಎಸ್‌ಸಿ ಪ್ರಮಾಣ



ಪತ್ರ ಅಥವಾ ಮೀಸಲಾತಿಯನ್ನು ಪಡೆದಿದ್ದರೆ, ಅವರ ಸಿಂಧುತ್ವ ಪ್ರಮಾಣಪತ್ರಗಳು ಮತ್ತು ಜಾತಿ ಪ್ರಮಾಣಪತ್ರಗಳನ್ನು ಸೂಕ್ತ ಕಾರ್ಯವಿಧಾನದೊಂದಿಗೆ ರದ್ದುಗೊಳಿಸಲಾಗುತ್ತದೆ. ಯಾರಾದರೂ ಸರ್ಕಾರಿ ಉದ್ಯೋಗಗಳಂತಹ ಪ್ರಯೋಜ ನಗಳನ್ನು ಪಡೆದಿದ್ದರೆ, ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಹೇಳಿದರು.ವಂಚನೆಯಿಂದ ಪಡೆದ ಜಾತಿ ಪ್ರಮಾಣ ಪತ್ರಗಳನ್ನು ಬಳಸಿಕೊಂಡು ಪ್ರಯೋಜನಗಳನ್ನು ಪಡೆದವರಿಂದ (ಹಣಕಾಸಿನ ಪ್ರಯೋಜನಗಳನ್ನು) ಮರು ಪಡೆಯಲು ಶಿಫಾರಸು ಮಾಡಲಾಗುತ್ತದೆ ಎಂದು ಅವರು ಹೇಳಿದರು.

ಗಂಡನ ಧರ್ಮವನ್ನು ಮರೆಮಾಡಿ ಮಹಿಳೆಯರನ್ನು ಮದುವೆಗೆ ವಂಚಿಸಿದ ಪ್ರಕರಣಗಳು ನಡೆದಿವೆ ಎಂದು ಬಿಜೆಪಿ ನಾಯಕಿ ಚಿತ್ರ ವಾಘ್ ಹೇಳಿದರು.ಸಾಂಗ್ಲಿಯಲ್ಲಿ ರಹಸ್ಯವಾಗಿ ಕ್ರಿಶ್ಚಿಯನ್ ಧರ್ಮವನ್ನು ಪ್ರತಿಪಾದಿಸುವ ಕುಟುಂಬವನ್ನು ಮಹಿಳೆಯೊಬ್ಬರು ಮದುವೆಯಾದ ಪ್ರಕರಣವನ್ನು ಅವರು ಉಲ್ಲೇಖಿಸಿದರು. ಮಹಿಳೆ ಚಿತ್ರಹಿಂಸೆ ಅನುಭವಿಸಿದಳು ಮತ್ತು ಬಲವಂತವಾಗಿ ತನ್ನ ಧರ್ಮವನ್ನು ಬದಲಾಯಿಸಲಾಯಿತು, ಇದು ಏಳು ತಿಂಗಳ ಗರ್ಭಿಣಿಯಾಗಿದ್ದಾಗ ಆಕೆಯ ಸಾವಿಗೆ ಕಾರಣವಾಯಿತು ಎಂದು ವಾಘ್ ಹೇಳಿದರು.

ಒಬ್ಬ ವ್ಯಕ್ತಿಯು ಯಾವುದೇ ಧರ್ಮವನ್ನು ಅನುಸರಿಸಬಹುದು ಮತ್ತು ಒಪ್ಪಿಗೆಯೊಂದಿಗೆ ಇನ್ನೊಬ್ಬ ವ್ಯಕ್ತಿಯನ್ನು ಮತಾಂತರಿಸಬಹುದು, ಆದರೆ ಕಾನೂನು ಬಲವಂತದ ಬಳಕೆ, ವಂಚನೆ ಅಥವಾ ಮತಾಂತರಕ್ಕಾಗಿ ಆಮಿಷ ಒಡ್ಡಲು ಅನುಮತಿಸುವುದಿಲ್ಲ ಎಂದು ಮುಖ್ಯಮಂತ್ರಿ ಹೇಳಿದರು.

# ನಾನು ತಪ್ಪು ಮಾಡಿಲ್ಲ ಎಂದು ಸುಪ್ರಿಂ ಮೆಟ್ಟಿಲೇರಿದ ನ್ಯಾಯಮೂರ್ತಿ ಯಶವಂತ್ ವರ್ಮಾ

**ನವದೆಹಲಿ, ಜು. 18–** ಅಲಹಾಬಾದ್ ಹೈಕೋರ್ಟ್ ನ್ಯಾಯಾಧೀಶ ಯಶವಂತ್ ವರ್ಮಾ ಅವರು ನಗದು ಪತ್ತೆ ಪ್ರಕರಣದಲ್ಲಿ ತಮ್ಮನ್ನು ತಪ್ಪಿತಸ್ಥರೆಂದು ಘೋಷಿಸಿದ ಆಂತರಿಕ ತನಿಖಾ ಸಮಿತಿಯ ವರದಿಯನ್ನು ಅಸಿಂಧುಗೊಳಿಸುವಂತೆ ಕೋರಿ ಸುಪ್ರಿಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಭಾರತದ ಆಗಿನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು ಮೇ 8 ರಂದು ಸಂಸತ್ತು ತಮ್ಮ ವಿರುದ್ಧ ದೋಷಾರೋಪಣೆಯನ್ನು ಪ್ರಾರಂಭಿಸುವಂತೆ ಒತ್ತಾಯಿಸಿ ಮಾಡಿದ ಶಿಫಾರಸನ್ನು ರದ್ದುಗೊಳಿಸುವಂತೆ ವರ್ಮಾ ಕೋರಿದ್ದಾರೆ. ಜುಲೈ 21 ರಿಂದ ಪ್ರಾರಂಭವಾಗುವ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ವರ್ಮಾ ಅವರನ್ನು ಪದಚ್ಯುತಗೊಳಿಸಲು ಸರ್ಕಾರ ಪ್ರಸ್ತಾವನೆ ಸಲ್ಲಿಸಲು ಯೋಜಿಸಿದೆ.ವಿಚಾರಣೆಯು ಪುರಾವೆಯ ಹೊರೆಯನ್ನು ಹಿಮ್ಮೆಟ್ಟಿಸಿದೆ ಎಂದು ನ್ಯಾಯಮೂರ್ತಿ ವರ್ಮಾ ತಮ್ಮ ಅರ್ಜಿಯಲ್ಲಿ ಸಲ್ಲಿಸಿದ್ದಾರೆ, ಇದು ಅವರ ವಿರುದ್ಧ ಹೊರಿಸಲಾದ ಆರೋಪಗಳನ್ನು ತನಿಖೆ ಮಾಡಿ ಸುಳ್ಳು ಎಂದು ಸಾಬೀತುಪಡಿಸುವ ಅಗತ್ಯವಿದೆ.



ಸಮಿತಿಯ ಸಂಶೋಧನೆಗಳು ಪೂರ್ವಭಾವಿ ನಿರೂಪಣೆಯನ್ನು ಆಧರಿಸಿವೆ ಎಂದು ಆರೋಪಿಸಿ, ನ್ಯಾಯಮೂರ್ತಿ ವರ್ಮಾ ಅವರು ಕಾರ್ಯವಿಧಾನದ ನ್ಯಾಯಯುತತೆಯನ್ನು ಕಡೆಗಣಿಸಿ ವಿಚಾರಣೆಯನ್ನು ತ್ವರಿತವಾಗಿ ಮುಗಿಸುವ ಪ್ರಚೋದನೆಯಿಂದ ಮಾತ್ರ ತನಿಖಾ ಸಮಯಗಳನ್ನು ನಡೆಸಲಾಗಿದೆ ಎಂದು ಹೇಳಿದರು. ತನಿಖಾ ಸಮಿತಿಯು ತನಗೆ ಪೂರ್ಣ ಮತ್ತು ನ್ಯಾಯಯುತ ವಿಚಾರಣೆಯನ್ನು ನೀಡದೆ ಪ್ರತಿಕೂಲ ಫಲಿತಾಂಶಗಳನ್ನು ಪಡೆದಿದೆ ಎಂದು ಅರ್ಜಿಯಲ್ಲಿ ವಾದಿಸಲಾಗಿದೆ. ಅರ್ಜಿಯನ್ನು ಇನ್ನೂ ವಿಚಾರಣೆಗೆ ಪೀಠದ ಮುಂದೆ ಪಟ್ಟಿ ಮಾಡಲಾಗಿಲ್ಲ. ಘಟನೆಯ ತನಿಖೆ ನಡೆಸುತ್ತಿದ್ದ ತನಿಖಾ ಸಮಿತಿಯ ವರದಿಯ ಪ್ರಕಾರ, ನ್ಯಾಯಮೂರ್ತಿ ವರ್ಮಾ ಮತ್ತು ಅವರ ಕುಟುಂಬ ಸದಸ್ಯರು ಅಂಗಡಿ ಕೋಣೆಯ ಮೇಲೆ ರಹಸ್ಯ ಅಥವಾ ಸಕ್ರಿಯ ನಿಯಂತ್ರಣವನ್ನು ಹೊಂದಿದ್ದರು, ಅಲ್ಲಿ ಅರ್ಧ ಸುಟ್ಟ ನಗದು ಸಂಗ್ರಹವು ಕಂಡುಬಂದಿತ್ತು.

ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಶೀಲ್ ನಾಗು ನೇತೃತ್ವದ ಮೂವರು ನ್ಯಾಯಾಧೀಶರ ಸಮಿತಿಯು 10 ದಿನಗಳ ಕಾಲ ವಿಚಾರಣೆ ನಡೆಸಿ, 55 ಸಾಕ್ಷಿಗಳನ್ನು ವಿಚಾರಣೆ ನಡೆಸಿ, ಮಾರ್ಚ್ 14 ರಂದು ರಾತ್ರಿ 11.35 ರ ಸುಮಾರಿಗೆ ದೆಹಲಿ ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಾಗಿದ್ದ ಮತ್ತು ಈಗ ಅಲಹಾಬಾದ್ ಹೈಕೋರ್ಟ್‌ನಲ್ಲಿರುವ ನ್ಯಾಯಮೂರ್ತಿ ವರ್ಮಾ ಅವರ ಅಧಿಕೃತ ನಿವಾಸದಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡ ಸ್ಥಳಕ್ಕೆ ಭೇಟಿ ನೀಡಿತು.ವರದಿಯ ಮೇರೆಗೆ ಕಾರ್ಯನಿರ್ವಹಿಸಿದ ಭಾರತದ ಮಾಜಿ ಮುಖ್ಯ ನ್ಯಾಯಮೂರ್ತಿ ಖನ್ನಾ, ನ್ಯಾಯಾಧೀಶರ ದೋಷಾರೋಪಣೆಗೆ ಶಿಫಾರಸು ಮಾಡುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದರು.

# ಜನರ ಸಮಸ್ಯೆ ಆಲಿಸಲು 'ಮನೆ ಮನೆಗೆ' ಪೊಲೀಸ್

ಗೋವಿಂದರಾಜ ನಗರ ವಾರ್ಡ್ ವಿಜಯನಗರ ಎಂ.ಸಿ. ಲೇ ಔಟ್‌ನಲ್ಲಿ ಇಂದು ಹಮ್ಮಿಕೊಂಡಿದ್ದ "ಮನೆ ಮನೆಗೆ ಪೊಲೀಸ್" ಬೀಟ್ ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಶಾಸಕ ಪ್ರಿಯಕೃಷ್ಣ, ಡಿಜಿ ಮತ್ತು ಐಜಿಪಿ ಡಾ. ಎಂ.ಎ. ಸಲೀಂ, ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಬೆಂಗಳೂರು,ಜು.18–ಜನರ ಮನೆ ಬಾಗಿಲಿಗೆ ಪೊಲೀಸರು ಅವರ ಸಮಸ್ಯೆಗಳನ್ನು ಕೇಳಿ ಪರಿಹಾರ ಕಂಡುಕೊಡಲಿದ್ದಾರೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ತಿಳಿಸಿದ್ದಾರೆ.

ನಗರದ ಗೋವಿಂದರಾಜನಗರದ ಎಂಸಿ ಲೇಔಟ್ ನಲ್ಲಿ ಮನೆ ಮನೆಗೆ ಪೊಲೀಸ್' ಯೋಜನೆಯನ್ನು ಉದ್ಘಾಟಿಸಿ ಮನೆಯೊಂದಕ್ಕೆ ಭೇಟಿ ಅವರ ಸಮಸ್ಯೆ ಅಲಿಸಿ ದಾಖಲು ಮಾಡಿಕೊಂಡ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದರು. ಪೊಲೀಸರು ಜನಸ್ನೇಹಿಯಾಗಿಸಲು ಈ ಯೋಜನೆಯನ್ನು ಆರಂಭಿಸಿದ್ದೇವೆ,ನಾವೇ ಜನರ ಮನೆ ಬಾಗಿಲಿಗೆ ಕಷ್ಟ ಕೇಳೋಣ ಎನ್ನುವ ತೀರ್ಮಾನ ಮಾಡಿದ್ದೇವೆ. ಪ್ರತಿ ಠಾಣೆಯ ವ್ಯಾಪ್ತಿಯಲ್ಲಿ ಈ ಕೆಲಸ ಆಗಬೇಕು,ಗಸ್ತು ಪೊಲೀಸರು ಈ ಕೆಲಸವನ್ನು ಮಾಡಬೇಕು ಎಂದು ಹೇಳಿದರು.ಯಾರ ಮನೆಯಲ್ಲಿ ಯಾರಿದ್ದಾರೆ, ಹೊಸದಾಗಿ ಬಂದಿದ್ದಾರಾ,



ಬಾಡಿಗೆಗೆ ಇದ್ದಾರೆಯೇ, ಅವರ ಉದ್ಯೋಗ ಎನ್ನುವುದರ ಮಾಹಿತಿ ಕಲೆಹಾಕಿ ಇಡೀ ಬೆಂಗಳೂರು ಡೇಟಾ ಬ್ಯಾಂಕ್ ನಮ್ಮ ಬಳಿ ಇರುತ್ತದೆ ಎಂದು ತಿಳಿಸಿದರು.

ಪೊಲೀಸರು ಬಂದಾಗ ಜನರು ಕಷ್ಟಸುಖ ಹೇಳಬಹುದು. ಏನಾದರೂ ತೊಂದರೆಯಾಗುತ್ತಿದ್ದರೆ ಹೇಳಬಹುದು. ಅನುಮಾನಸ್ಪದ ವ್ಯಕ್ತಿಗಳು ಕಂಡು ಬಂದರೆ ಮಾಹಿತಿ ನೀಡಬಹುದು. ಜನಸ್ನೇಹಿ ಪೊಲೀಸರ ಜೊತೆಗೆ ಶಾಂತಿ ಕಾಪಾಡಲು ಈ ಕಾರ್ಯಕ್ರಮ ಸಹಾಯ ಆಗುತ್ತದೆ. ನಿಮ್ಮ ಮನೆಗೆ ಬಂದಾಗ ನಿಮ್ಮ ಹೆಸರನ್ನು ನಮೂದಿಕೊಳ್ಳುತ್ತಾರೆ. ಬಳಿಕ ಅದನ್ನ ಡಿಜಿಟಲೈಸ್ ಮಾಡಿ ಇಟ್ಟುಕೊಳ್ಳುತ್ತಾರೆ ಎಂದು ಪರಮೇಶ್ವರ್ ಮಾಹಿತಿ ನೀಡಿದರು.

# ವಿಳಂಬ ಧೋರಣೆ ತೋರಿದ ಅಧಿಕಾರಿಗಳ ಚಳಿ ಬಿಡಿಸಿದ ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು,ಜು.18–** ಭೂಸುರಕ್ಷಾ ಯೋಜನೆ ರಾಜ್ಯಾದ್ಯಂತ ಯಶಸ್ವಿಯಾಗಿ ನಡೆಯುತ್ತಿದ್ದರೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಉದ್ದೇಶಪೂರಕವಾಗಿ ಅಧಿಕಾರಿಗಳು ವಿಳಂಬ ಧೋರಣೆ ತೋರುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಕಂದಾಯ ಸಚಿವ ಕೃಷ್ಣಬೈರೇಗೌಡರವರು ತಹಸೀಲ್ದಾರ್ ಹಾಗೂ ಶಿರಸ್ತೆದಾರರನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ವಿಕಾಸಸೌಧದಲ್ಲಿಂದು ನಡೆದ ಎರಡೂ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಸೀಲ್ದಾರ್, ಉಪ ತಹಸೀಲ್ದಾರ್‌ಗಳ ಸಭೆಯಲ್ಲಿ ಮಾತನಾಡಿದ ಅವರು, ಭೂಸುರಕ್ಷಾ ಯೋಜನೆಯಡಿ ಭೂದಾಖಲೆಗಳು ಡಿಜಿಟಲೀಕರಣಗೊಳ್ಳುವ ಪ್ರಕ್ರಿಯೆ ಇಡೀ ರಾಜ್ಯದಲ್ಲಿ ನಡೆಯುತ್ತಿದೆ. ಆದರೆ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಉದ್ದೇಶಪೂರಕವಾಗಿ ಆನ್‌ಲೈನ್‌ನಲ್ಲಿ ದೃಢೀಕರಿಸಿದ ದಾಖಲೆಗಳನ್ನು ನೀಡಲು ತಡೆಹಿಡಿಯಲಾಗುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ರಾಜ್ಯಾದ್ಯಂತ 21 ಲಕ್ಷ ಪುಟಗಳಷ್ಟು ಆನ್‌ಲೈನ್ ಮೂಲಕ ದೃಢೀಕರಿಸಿದ ದಾಖಲೆಗಳನ್ನು ವಿತರಣೆ ಮಾಡಿದಾಗ ಬೆಂಗಳೂರು ನಗರ ಜಿಲ್ಲೆಯಲ್ಲಿ ಕೇವಲ 25 ಪುಟಗಳಷ್ಟು ಮಾತ್ರ ದಾಖಲೆಗಳನ್ನು ನೀಡಲಾಗಿತ್ತು. ವಿಶ್ವದಲ್ಲಿಯೇ ಐಟಿ ರಾಜಧಾನಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಬೆಂಗಳೂರಿನಲ್ಲಿ ಆನ್‌ಲೈನ್ ಮೂಲಕ ದಾಖಲಾತಿಗಳನ್ನು ವಿತರಣೆ ಮಾಡಲು ಇರುವ ಅಡ್ಡಿಯಾದರೂ ಏನು ಎಂದು ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ರಾಜ್ಯದ ಎಲ್ಲೆಡೆ ಹೆಚ್ಚೂ ಕಡಿಮೆ ಯಶಸ್ವಿಯಾಗಿ ಆನ್‌ಲೈನ್ ಮೂಲಕ





ದೃಢಿಕರಿಸಿದ ದಾಖಲೆ ವಿತರಿಸಲಾಗುತ್ತಿದೆ. ಆದರೆ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ತಹಸೀಲ್ದಾರ್, ಗ್ರೇಡ್–2 ತಹಸೀಲ್ದಾರ್, ರೆಕಾರ್ಡ್ ರೂಂ ಕೀಪರ್‌ಸಗಳು ಸೇರಿ ದಾಖಲೆಗಳನ್ನು ನೀಡುವುದಕ್ಕೆ ತಡೆಯೊಡ್ಡುತ್ತಿದ್ದಾರೆ ಎಂದು ಗಂಭೀರ ಆರೋಪವನ್ನು ಸಚಿವರು ಮಾಡಿದರು.


ಈ ವಿಚಾರದ ಬಗ್ಗೆ ಬೇರೆಯ ರೂಪದಲ್ಲಿ ಹೇಳಲು ಸಾಧ್ಯವಿಲ್ಲ. ತಾಲೂಕು ಕಚೇರಿಗಳಲ್ಲಿ ಅಧಿಕಾರಿಗಳು ಇರುವುದಿಲ್ಲ. ಬೇರೆ ಎಲ್ಲಿ ಕೆಲಸವಿರುತ್ತದೆ. ಮಾತೆತ್ತಿದರೆ ನ್ಯಾಯಾಲಯದ ಕೇಸ್? ವಿಚಾರವನ್ನು ಪ್ರಸ್ತಾಪ ಮಾಡಲಾಗುತ್ತದೆ. ಕಚೇರಿಯಿಂದ ಹೊರಹೋಗುವ ಚಲನವಲನಗಳ ದಾಖಲಾತಿ ಮಾಹಿತಿ ಇರುವುದಿಲ್ಲ. ಕಂದಾಯ ಇಲಾಖೆಯ ಪ್ರದಾನ ಕಾರ್ಯದರ್ಶಿ ನಿಯಮಿತವಾಗಿ ನ್ಯಾಯಾಲಯದ ಪ್ರಕರಣಗಳಲ್ಲಿ ಹಾಜರಾಗುತ್ತಾರೆ. ಅವರಿಗೆ ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಿಗರು ಮಾಹಿತಿ ನೀಡಲು ನೆರವಾಗುತ್ತಾರೆ ಎಂದು ಹೇಳಿದರು.

ತಾಲ್ಲೂಕು ಕಚೇರಿ ಬಿಟ್ಟು ಬೇರೆಲ್ಲಿ ನಿಮಗೆ ಕಚೇರಿ ಇದೆಯೋ ಗೊತ್ತಿಲ್ಲ. ತಾಲೂಕು ಕಚೇರಿಗಳಲ್ಲಿ ಕೂರುವುದೇ ಇಲ್ಲ ಎಂದರೆ ಹೇಗೆ? ಎಂದು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಇದುವರೆಗೂ ಎಲ್ಲವನ್ನೂ ಸಹಿಸಿಕೊಂಡಿದ್ದೇವೆ. ಆದರೆ ಮಿತಿಮೀರಿದರೆ ಸಹಿಸಲಾಗುವುದಿಲ್ಲ ಎಂದು ಖಾರವಾಗಿ ಪ್ರತಿಕ್ರಿಯಿಸಿದರು.ಇನ್ನುಮುಂದೆ ಈ ಅವ್ಯವಸ್ಥೆ ಸರಿ ಹೋಗದಿದ್ದರೆ ಸೂಕ್ತ ಪರಿಣಾಮ ಆಗಲೇಬೇಕು. ಸುಧಾರಣೆ ತರಲಾಗದಿದ್ದರೆ ಮುಂದೇನು ಆಗಬೇಕು ಎಂಬುದು ನಿರ್ಧಾರ ಮಾಡಲಾಗುವುದು. ಎಲ್ಲರಿಗೂ ಮೀರಿದವರಿಗೆ ಭೂಮಿಗೆ ಇಳಿಸುವುದೂ ಗೊತ್ತಿದೆ. ಚೆನ್ನಾಗಿ ಕೆಲಸ ಮಾಡುವ ಒಳ್ಳೆಯವರಿಗೆ ಮೆಚ್ಚುಗೆ ಸೂಚಿಸುವುದು ಗೊತ್ತಿದೆ ಎಂದು ತೀಕ್ಷ್ಣವಾಗಿ ನುಡಿದರು.

ಭೂಸುರಕ್ಷಾ ಯೋಜನೆ ಅನುಷ್ಠಾನದ ವಿಳಂಬಕ್ಕೆ ಸರಿಯಾದ ಕಾರಣ ಹಾಗೂ ಸೂಕ್ತ ಉತ್ತರ ನೀಡಿ ಎಂದರೆ ಇಲ್ಲಸಲ್ಲದ ಸಬೂಬು ಹೇಳುತ್ತಿ?ರ. ನಿಮಗೆ ನಾಚಿಕೆಯಾಗುವುದಿಲ್ಲವೇ?, ನಿಮ ಕಚೇರಿಯಲ್ಲಿ ಏನು ನಡೆಯುತ್ತಿದೆ ಎಂಬುದರ ಪರಿಜ್ಞಾನವೂ ನಿಮಗಿಲ್ಲ, ಎಲ್ಲಿ, ಏನು ಮಾತನಾಡುತ್ತಿದ್ದೇವೆ ಎಂಬ ಅರಿವು ಇದೆಯೇ? ಎಂದು ಹಿಗ್ಗಾಮುಗ್ಗಾ ತರಾಟೆಗೆ ಸಚಿವರು ತೆಗೆದುಕೊಂಡರು. ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆ



**ಬೆಂಗಳೂರು,ಜು.18**–ನಗರದಲ್ಲಿ ಶಾಲೆಗಳಿಗೆ ಬಾಂಬ್ ಬೆದರಿಕೆ ಮೇಲ್ ರವಾನೆಯು ಮುಂದುವರೆದಿದ್ದು,ಕೆಂಗೇರಿ,ರಾಜರಾಜೇಶ್ವರಿ ನಗರ ಸೇರಿದಂತೆ ನಗರದ 40 ಕ್ಕೂ ಖಾಸಗಿ ಶಾಲೆಗಳಿಗೆ ಕಿಡಿಗೇಡಿಗಳಿಂದ ಬಾಂಬ್ ಬೆದರಿಕೆಯ ಇಮೇಲ್ ಸಂದೇಶವು ಇಂದು ಬೆಳಿಗ್ಗೆ ಬಂದಿದೆ.

roadkill333@atomicmail.io ಎಂಬ ಇ–ಮೇಲ್ ಐಡಿಯಿಂದ ಬೆಳಿಗ್ಗೆ 7.45ರ ವೇಳೆ ಎಂ.ಎಸ್.ಧೋನಿ ಗ್ಲೋಬಲ್ ಸ್ಕೂಲ್ ಸೇರಿದಂತೆ, ಆರ್.ಆರ್. ನಗರ ಹಾಗೂ ಕೆಂಗೇರಿ ಭಾಗದ ಶಾಲೆಗಳಿಗೆ ಬೆದರಿಕೆ ಕಳುಹಿಸಲಾಗಿದೆ. ಮೇಲ್ ಗಮನಿಸುತ್ತಿದ್ದಂತೆ ಶಾಲೆಗಳಲ್ಲಿ ಆತಂಕ ಎದುರಾಗಿದ್ದು, ಪೊಲೀಸರಿಗೆ ಮಾಹಿತಿ ನೀಡಲಾಗಿದೆ.ಕೂಡಲೇ ಎಚ್ಚೆತ್ತ ಪೊಲೀಸರು, ಮುಂಜಾಗ್ರತಾ ಕ್ರಮವಾಗಿ ಬಾಂಬ್ ನಿಷ್ಕ್ರಿಯ ದಳದೊಂದಿಗೆ ತೆರಳಿ ತಪಾಸಣೆ ನಡೆಸಿದಾಗ ಹುಸಿ ಬೆದರಿಕೆ ಎನ್ನುವುದು ಕಂಡುಬಂದಿದೆ.

"ಕಪ್ಪು ಬಣ್ಣದ ಪ್ಲಾಸ್ಟಿಕ್ ಬ್ಯಾಗ್‌ಗಳಲ್ಲಿ ಸ್ಫೋಟಕ ತುಂಬಿ ಶಾಲಾ ತರಗತಿಗಳಲ್ಲಿ ಇರಿಸಲಾಗಿದೆ. ನನಗೆ ನಿಜಕ್ಕೂ ನನ್ನ ಜೀವನವೇ ಇಷ್ಟವಿಲ್ಲ. ನಾನೂ ಸಹ ಆತ್ಮಹತ್ಯೆಗೆ ಶರಣಾಗುತ್ತೇನೆ. ದಯವಿಟ್ಟು ಈ ಮೇಲ್ ಸಂದೇಶದ ಪ್ರತಿಯನ್ನು ಮಾಧ್ಯಮಗಳಿಗೆ ನೀಡಿ" ಎಂದು ರೋಡ್‌ಕಿಲ್ ಎಂಬ ಹೆಸರಿನೊಂದಿಗೆ ಮೇಲ್ ಮಾಡಲಾಗಿದೆ.

ಬೆಳಗ್ಗೆ 7.45ರ ಸಮಯದಲ್ಲಿ ನಮಗೆ ಮೇಲ್ ಬಂದಿದೆ. ಶಾಲೆಯಲ್ಲಿ ಪರೀಕ್ಷೆ ನಡೆಯುತ್ತಿದೆ. ತಕ್ಷಣ ನಾವು ಪೊಲೀಸರಿಗೆ ಮಾಹಿತಿ ನೀಡಿದ್ದೇವೆ. ಪೊಲೀಸರು ಬಂದು ತಪಾಸಣೆ ಮಾಡಿದ್ದಾರೆ, ಯಾವುದೇ ಸ್ಫೋಟಕಗಳು ಪತ್ತೆಯಾಗಿಲ್ಲ. ಯಾರೋ ಮಾನಸಿಕವಾಗಿ ತೊಂದರೆಗೊಳಗಾಗಿರುವ ವ್ಯಕ್ತಿ ಮೇಲ್ ಮಾಡಿರುವಂತಿದೆ. ಸದ್ಯ ಪರೀಕ್ಷೆಗಳು ಮುಂದುವರೆದಿವೆ" ಎಂದು ಸೇಂಟ್ ಜರ್ಮನ್ ಅಕಾಡೆಮಿ ಸ್ಕೂಲ್‌ನ ಪ್ರಿನ್ಸಿಪಾಲ್ ಮೋನಿಕಾ ಆಂಟನಿ ತಿಳಿಸಿದ್ದಾರೆ.

ತಪಾಸಣೆ ವೇಳೆ ಹುಸಿ ಬೆದರಿಕೆ ಎನ್ನುವುದು ಪತ್ತೆಯಾಗಿದ್ದು, ಬೆದರಿಕೆ ಇಮೇಲ್ ಸಂದೇಶ ಕಳುಹಿಸಿರುವ ದುಷ್ಕರ್ಮಿಗಳ ಪತ್ತೆಗೆ ನಗರ ಪೊಲೀಸರು ತನಿಖೆಯನ್ನು ಕೈಗೊಂಡಿದ್ದಾರೆ.

ಇಮೇಲ್ ಬೆದರಿಕೆಯಲ್ಲಿ ನಮಸ್ಕಾರ, ಶಾಲಾ ತರಗತಿಗಳಲ್ಲಿ ನಾನು ಹಲವು ಸ್ಫೋಟಕ ವಸ್ತುಗಳು ಇರಿಸಿದ್ದೇನೆ. ಸ್ಫೋಟಕಗಳನ್ನು ಕಪ್ಪು ಪ್ಲಾಸ್ಟಿಕ್ ಚೀಲಗಳಿಂದ ಮುಚ್ಚಿಡಲಾಗಿದೆ. ನಿಮ್ಮೆಲ್ಲರನ್ನೂ ಈ ಲೋಕದಿಂದ ಅಳಿಸಿಹಾಕುತ್ತೇನೆ. ಯಾರೊಬ್ಬರು ಬದುಕುಳಿಯುವುದಿಲ್ಲ. ಈ ಸುದ್ದಿಯನ್ನು ನಾನು ನೋಡುವಾಗ ಸಂತೋಷದಿಂದ ನಗುತ್ತೇನೆ ಎಂದು ಕಿಡಿಗೇಡಿ ಇ–ಮೇಲ್‌ನಲ್ಲಿ ಉಲ್ಲೇಖಿಸಿದ್ದಾನೆ.

ನೀವೆಲ್ಲರೂ ಕಷ್ಟ ಅನುಭವಿಸಲೇಬೇಕು. ಈ ಸುದ್ದಿ ಹೊರ ಬಂದ ನಂತರ ನಾನು ಕತ್ತು ಕೊಯ್ದುಕೊಂಡು ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ. ನನಗೆ ಯಾರೊಬ್ಬರು ನಿಜವಾಗಿಯೂ ಸಹಾಯ ಮಾಡಿಲ್ಲ. ಮನೋವೈದ್ಯರು, ಮನೋವಿಜ್ಞಾನಿಗಳು, ಯಾರೂ ಕಾಳಜಿ ವಹಿಸಿಲ್ಲ ಮತ್ತು ಯಾ ರೂ ಎಂದಿಗೂ ಕಾಳಜಿ ವಹಿಸುವುದಿಲ್ಲ ಎಂದಿದ್ದಾನೆ.

ನೀವು ಅಸಹಾಯಕ ಮತ್ತು ಅಜ್ಞಾನಿ ಮನುಷ್ಯರಿಗೆ ಔಷಧ ನೀಡುವುದರ ಬಗ್ಗೆ ಮಾತ್ರ ಕಾಳಜಿ ವಹಿಸುತ್ತೀರಿ, ಆ ಔಷಧಿಗಳು ನಿಮ್ಮ ಅಂಗಗಳನ್ನು ಹಾಳು ಮಾಡುತ್ತವೆ ಅಥವಾ ಅದು ತೂಕ ಹೆಚ್ಚಿಸ ಲು ಕಾರಣವಾಗುತ್ತವೆ ಎಂದು ಮನೋ ವೈದ್ಯರು ಎಂದಿಗೂ ನಿಮಗೆ ಹೇಳುವುದಿಲ್ಲ.

ನಗರದ ಶಾಲೆಗಳಿಗೆ ಬಾಂಬ್ ಬೆದರಿಕೆ ಕರೆ ಬಂದ ಹಿನ್ನೆಲೆ ಸೈಂಟ್ ಜರ್ಮೈನ್ ಅಕಾಡೆಮಿ ಶಾಲೆಗೆ ಪೊಲೀಸರು ಬಿಗಿ ಭದ್ರತೆ ಕೈಗೊಂಡಿರುವುದು.

ಮನೋವೈದ್ಯಕೀಯ ಔಷಧಗಳು ಜನರಿಗೆ ಸಹಾಯ ಮಾಡುತ್ತವೆ ಎಂದು ಯೋಚಿಸುವಂತೆ ಜನರ ಬ್ರೈನ್ ವಾಶ್ ಮಾಡುತ್ತಾರೆ. ಆದರೆ ಅದು ಹಾಗೆ ಆಗುವುದಿಲ್ಲ ಎಂಬುದಕ್ಕೆ ನಾನು ಜೀವಂತ ಸಾಕ್ಷಿ ನೀಡುತ್ತೇನೆ. ನೀವೆಲ್ಲರೂ ಇದಕ್ಕೆ ಅರ್ಹರು. ನನ್ನಂತೆಯೇ ನೀವು ಸಹ ಕಷ್ಟ ಅನುಭವಿಸಲು ಅರ್ಹರು ಎಂದು ಇ–ಮೇಲ್‌ನಲ್ಲಿ ಉಲ್ಲೇಖಿಸಲಾಗಿದೆ.

ಮೇಲ್ ಡೊಮೈನ್ ಬ್ರಿಟೀಷ್ ಇಂಡಿಯನ್ ಓಷನ್ ಟೆರಿಟರಿಯ ಮೂಲದ್ದಾಗಿದ್ದು, ತನಿಖೆ ನಡೆಸುತ್ತಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಇನ್ನು ದೆಹಲಿಯ 10ಕ್ಕೂ ಹೆಚ್ಚು ಶಾಲೆಗಳಿಗೂ ಬಾಂಬ್ ಬೆದರಿಕೆ ಇ–ಮೇಲ್ ಬಂದಿದೆ. ಕೂಡಲೇ ಎಚ್ಚೆತ್ತ ಪೊಲೀಸ್ ಮತ್ತು ಬಾಂಬ್ ನಿಷ್ಕ್ರಿಯ ದಳ ಸಿಬ್ಬಂದಿ ಶಾಲೆಗಳಲ್ಲಿ ಪರಿಶೀಲನೆ ಮಾಡಿದ್ದಾರೆ. ಈ ವೇಳೆ ಯಾವುದೇ ಸ್ಫೋಟಕ ವಸ್ತು ಪತ್ತೆಯಾಗಿಲ್ಲ. ಹೀಗಾಗಿ ಹುಸಿ ಬಾಂಬ್ ಸಂದೇಶ ಎಂದು ದೆಹಲಿ ಪೊಲೀಸರು ಮಾಹಿತಿ ನೀಡಿದ್ದಾರೆ.

# ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಭೇಟಿ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜು.18–** ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಶುಕ್ರವಾರ ಭೇಟಿ ನೀಡಿದರು.

ತರಗತಿಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳ ಕಲಿಕಾ ಪ್ರಕ್ರಿಯೆಯನ್ನು ನೇರವಾಗಿ ವೀಕ್ಷಿಸಿದರು. ಈ ವೇಳೆ, ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಪಠ್ಯ ವಿಷಯಗಳ ಕುರಿತು ಪ್ರಶ್ನೆಗಳನ್ನು ಕೇಳಿದರು. ಅಲ್ಲದೆ, ಶಿಕ್ಷಕರು ಬೋಧನಾ ವಿಧಾನಗಳನ್ನು ಕುರಿತು ಮಾಹಿತಿ ಪಡೆದರು. ನಂತರ ವಿಜ್ಞಾನ ಪ್ರಯೋಗಾಲಯ ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ, "ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಪ್ರಮುಖ ಆದ್ಯತೆಯಾಗಿದೆ. ಶಾಲೆಯಲ್ಲಿನ ಶೈಕ್ಷಣಿಕ ವಾತಾವರಣ ಉತ್ತಮವಾಗಿದ್ದು, ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಪ್ರಯತ್ನ ಶ್ಲಾಘನೀಯವಾಗಿದೆ" ಎಂದು ತಿಳಿಸಿದರು. ಅಲ್ಲದೆ, ಕೆಲವು ಸಣ್ಣಪುಟ್ಟ ಸುಧಾರಣೆಗಳ ಬಗ್ಗೆ ಸಲಹೆಗಳನ್ನು ನೀಡಿದರು.

ಉಪಪ್ರಾಂಶುಪಾಲರು ಹಾಗೂ ಶಿಕ್ಷಕರೊಂದಿಗೆ ಸಭೆ ನಡೆಸಿದ ಶಿಕ್ಷಣಾಧಿಕಾರಿಗಳು, ಶಾಲೆಯ ಪ್ರಗತಿ ವರದಿ, ಹಾಜರಾತಿ, ಪರೀಕ್ಷಾ ಫಲಿತಾಂಶಗಳು ಹಾಗೂ ಸರ್ಕಾರದ ಯೋಜನೆಗಳ ಅನುಷ್ಠಾನದ ಬಗ್ಗೆ ಚರ್ಚಿಸಿದರು. ಯಾವುದೇ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ತಕ್ಷಣವೇ ಬಗೆಹರಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಉಪ ಪ್ರಾಂಶುಪಾಲರಾದ ಸುಧಾಕರ ಸಂಜೀವ, ಶಿಕ್ಷಕರಾದ ರೇಖಾದೇವಿ, ಬಂಡೆಮ್ಮ, ಅಶೋಕ ಕುಮಾರ ಮಳ್ಳಿ, ಮಂಜುಳಾ ಹಿರೇಮಠ, ರಜನಿ, ಚನ್ನಬಸವರಾಜ, ಶೇಖ್ ಹುಸೇನ್, ಪ್ರಮೋದ ಕುಮಾರ, ಶ್ರೀಮತಿ ಕಟ್ಟಿ, ನುಜಹತ್ ಫಾತಿಮಾ, ಅನ್ವರ್ ಹುಸೇನ್, ಶರಣಮ್ಮ, ಶರತ್‌ಕುಮಾರ ರಾಜಶೇಖರ.ಎಚ್,ರೇಣುಕಾ ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಂದ ಗೃಹ ಆರೋಗ್ಯ ಯೋಜನೆಯ ಕೈಪಿಡಿ ಬಿಡುಗಡೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.18–**ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹ ಆರೋಗ್ಯ ಯೋಜನೆಯ ಕೈಪಿಡಿಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬಿಡುಗಡೆ ಮಾಡಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜುಲೈ 18ರಂದು ನಡೆದ ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಕೈಪಿಡಿ ಬಿಡುಗಡೆಗೊಳಿಸಿದರು. ಜಿಲ್ಲೆಯಾದ್ಯಂತ ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ಬಲಪಡಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ಈ ಯೋಜನೆಯನ್ನು ಮುಖ್ಯಮ ಂತ್ರಿಗಳಾದ ಸಿದ್ದರಾಮಯ್ಯ ಅವರು 2024 ಅಕ್ಟೋಬರ್ 24 ರಂದು ಬೆಂಗಳೂರಿನ ವಿಧಾನಸೌಧದಲ್ಲಿ ಉದ್ಘಾಟನೆಗೊ ಳಿಸಿದ್ದಾರೆ. ಈ ಕಾರ್ಯಕ್ರಮದ ಅಡಿಯಲ್ಲಿ ಆರೋಗ್ಯ ಕಾರ್ಯಕರ್ತರು ಗ್ರಾಮೀಣ ಭಾಗದ ಎಲ್ಲಾ ನಾಗರೀಕರ ಮನೆಗಳಿಗೆ ಭೇಟಿ ನೀಡಿ 30 ವರ್ಷ ವಯೋಮಾನದ ಜನರಲ್ಲಿ ಪ್ರಮುಖ 14 ಅಸಾಂಕ್ರಾಮಿಕ ರೋಗಗಳಾದ ಅಧಿಕ ರಕ್ತದೊತ್ತಡ, ಮಧುಮೇಹ ಅಥವಾ ಸಕ್ಕರೆ ಕಾಯಿಲೆ ಸಂಬಂದಿತ ಪಾದದ ಸಮಸ್ಯೆ (ಡಯಾಬಿಟಿಕ್ ಫೂಟ್) ಹಾಗೂ ಕಣ್ಣಿನ ಸಮಸ್ಯೆ (ಡಯಾಬಿಟಿಕ್ ರೆಟಿನೋಪತಿ), ದೀರ್ಘಕಾಲಿನ ಮೂತ್ರಪಿಂಡ ಕಾಯಿಲೆ, ಲಿವರ್ ಅಥವಾ ಯಕೃತಿನ ಕಾಯಿಲೆಗಳು, ಶ್ವಾಸಕೋಶ ಸಂಬಂಧಿತ ದೀರ್ಘಕಾಲಿನ ರೋಗ, ನಿದ್ರೆಯಲ್ಲಿ ಉಸಿರುಕಟ್ಟುವಿಕೆ, ಬಾಯಿ, ಸ್ತನ ಹಾಗೂ ಗರ್ಭಕಂಠದ ಕ್ಯಾನ್ಸರ್, ರಕ್ತಹೀನತೆ, ಮಾನಸಿಕ ಮತ್ತು ನರವೈಜ್ಞಾನಿಕ ಕಾಯಿಲೆಗಳ ಕುರಿತು ತಿಳುವಳಿಕೆ ನೀಡಿ ಅರಿವು ಮೂಡಿಸುವರು. ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ಕಾಯಿಲೆಗಳಿಗೆ ವೈದ್ಯರ ಸಲಹೆಯಂತೆ ನಿರಂತರ ಉಚಿತ ಔಷದಿಗಳ ವಿತರಣೆ. ಅಸಾಂಕ್ರಾಮಿಕ ರೋಗಗಳನ್ನು ಪ್ರಾರಂಭಿಕ ಹಂತದಲ್ಲೇ ಪತ್ತೆ ಹಚ್ಚಿ. ನಿರಂತರ ಉಚಿತ ತಪಾಸಣೆ ಹಾಗೂ ಚಿಕಿತ್ಸೆಯ ಮೂಲಕ ಅಡ್ಡ ಪರಿಣಾಮ ಮತ್ತು ಅಕಾಲಿಕ ಮರಣ ತಡೆಗಟ್ಟುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದು ಇದೆ ವೇಳೆ ಆರೋಗ್ಯ ಅಧಿಕಾರಿಗಳು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಶಾಸಕರಾದ ಕರೆಮ್ಮ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಶರಣಗೌಡ ಪಾಟೀಲ ಬಯ್ಯಾಪುರ, ಬಸನಗೌಡ ಬಾದರ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿಗಳು ಡಾ. ಸುರೇಂದ್ರ ಬಾಬು, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ಕೆ. ಗಣೇಶ್ ಸೇರಿದಂತೆ ಕೆಡಿಪಿ ನಾಮ ನಿರ್ದೇಶಿತ ಸದಸ್ಯರು ಮತ್ತು ಇನ್ನಿತರರು ಇದ್ದರು.

# ಕೈ ಶಾಸಕರಿಗೆ ಬಂಪರ್:50 ಕೋಟಿ ರೂ ಅನುದಾನ ಬಿಡುಗಡೆ

**ಬೆಂಗಳೂರು, ಜು.18–** ಶಾಸಕರ ಬೇಸರಕ್ಕೆ ಮಣಿದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್ ಶಾಸಕರಿಗೆ 50 ಕೋಟಿ ರೂ ಅನುದಾನ ಬಿಡುಗಡೆಗೆ ಹಸಿರು ನಿಶಾನೆ ತೋರಿದ್ದಾರೆ.



ಅನುದಾನ ಸಿಕ್ಕಿಲ್ಲ ಎಂದು ಕಾಂಗ್ರೆಸ್ ಶಾಸಕರು ಬಹಿರಂಗ ಅಸಮಾಧಾನ ಹೊರಹಾಕಿದ್ದ ಬೆನ್ನಲ್ಲೇ ಹಣ ಬಿಡುಗಡೆ ಮಾಡಲಾಗಿದೆ.ಅನುದಾನ ಸಿಕ್ತಿಲ್ಲ ಎಂದು ಬಹಿರಂಗವಾಗಿ ಶಾಸಕರು ಅಸಮಾಧಾನ ವ್ಯಕ್ತಪಡಿಸಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಎದುರು ಶಾಸಕರು ಅಹವಾಲು ತೋಡಿಕೊಂಡಿದ್ದರು.

ಕಾಂಗ್ರೆಸ್ ಶಾಸಕರಿಗೆ ತಲಾ 50 ಕೋಟಿ ರೂ. ಅನುದಾನ ಬಿಡುಗಡೆಗೆ ಸಿಎಂ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಲೋಕೋಪಯೋಗಿ ಇಲಾಖೆ ಅಡಿ 37.50 ಕೋಟಿ ರೂ., ಶಾಸಕರ ವಿವೇಚನಾಧಿಕಾರದ ಅಡಿ ಹಾಗೂ ಇತರೆ ಇಲಾಖೆ ಕಾಮಗಾರಿಗೆ 12.50 ಕೋಟಿ ರೂ. ಅನುದಾನ ಬಿಡುಗಡೆ ಮಾಡುವ ಬಗ್ಗೆ ಸಿಎಂ ಎಲ್ಲಾ ಶಾಸಕರಿಗೆ ಪತ್ರ ಬರೆದಿದ್ದಾರೆ.

**ಸಿಎಂ ಪತ್ರದಲ್ಲೇನಿದೆ:** 2025–26 ಸಾಲಿನ ರಾಜ್ಯ ಆಯವ್ಯಯದಲ್ಲಿ ಘೋಷಿಸಲಾದ ಮುಖ್ಯಮಂತ್ರಿಯವರ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ ತಮ್ಮ ವಿಧಾನಸಭಾ ಕ್ಷೇತ್ರಕ್ಕೆ 50 ಕೋಟಿ ರೂ.ಗಳ ವಿಶೇಷ ಅನುದಾನ ಹಂಚಿಕೆ ಮಾಡಲಾಗುವುದು. ಮುಖ್ಯಮಂತ್ರಿಯವರಿಗೆ ಬರೆದ ತಮ್ಮ ಬೇಡಿಕೆ ಪತ್ರದೊಂದಿಗೆ, ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಕಾಮಗಾರಿಗಳ ವಿವರಗಳನ್ನು ನೀಡುವುದು. ದಿನಾಂಕ: 30.07.2025 ಹಾಗೂ ದಿನಾಂಕ:31.07.2025ರಂದು ಜಿಲ್ಲಾವಾರು ವಿಧಾನಸಭಾ ಸದಸ್ಯರ ಸಭೆಯನ್ನು ಕೊಠಡಿ ಸಂಖ್ಯೆ–313, ಸಮಿತಿ ಕೊಠಡಿ, 3ನೇ ಮಹಡಿ, ವಿಧಾನಸೌಧ ಇಲ್ಲಿ ಏರ್ಪಡಿಸಲಾಗಿದೆ.

ಸದರಿ ಸಭೆಯ ವಿವರಗಳನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಮೇಲ್ಕಂಡಂತೆ ಕಾಮಗಾರಿಗಳ ವಿವರಗಳೊಂದಿಗೆ ಸಭೆಗೆ ಹಾಜರಾಗುವುದು' ಎಂದು ಸಿದ್ದರಾಮಯ್ಯ ಅವರ ಆದೇಶ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಅನುದಾನ ಬಿಡುಗಡೆ ವಿಚಾರವಾಗಿ ಕಾಂಗ್ರೆಸ್‌ನ ಎಲ್ಲ ಶಾಸಕರಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಅದೇ ರೀತಿ, ಶಾಸಕಾಂಗ ಪಕ್ಷದ ಕಚೇರಿಯಿಂದಲೂ ಶಾಸಕರಿಗೆ ಮಾಹಿತಿ ರವಾನೆಯಾಗಿದೆ ಎಂದು ಮೂಲಗಳು ತಿಳಿಸಿವೆ.

# ಕೆಡಿಪಿ ಸಭೆಯಲ್ಲಿ ಅಶಿಸ್ತು ತೋರಿದ ಉಪ ಅರಣ್ಯ ಸಂರಕ್ಷಣಾಧಿಕಾರಿಗೆ ನೋಟೀಸ್

**ರಾಯಚೂರ,ಜು.18–** ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜುಲೈ 18ರಂದು ನಡೆದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಯು

ಅಶಿಸ್ತು ತೋರಿದ್ದಾಗಿ ಖಾಸಗಿ ಸುದ್ದಿವಾಹಿನಿಯಲ್ಲಿ ಪ್ರಸಾರವಾದ ವರದಿಯ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗೆ ಎದ್ದು ನಿಲ್ಲಿಸಿ ವಿವರಣೆ ಕೇಳಿದರು. ಈ ವೇಳೆ ಅಧಿಕಾರಿ ಪ್ರವೀಣ ಅವರು ಕ್ಷಮೆ ಕೇಳಿದರು. ಅತ್ಯಂತ ಮಹತ್ವದ ಕೆಡಿಪಿ ಸಭೆಯಲ್ಲಿ ಶಿಸ್ತಿನಿಂದ ಭಾಗಿಯಾಗದೇ ಮೋಬೈಲನಲ್ಲಿ ತಲ್ಲೀಣರಾಗಿ ಅಸಭ್ಯ ವರ್ತನೆ ತೋರಿರುವುದು ಅಕ್ಷಮ್ಯ ಎಂದು ಸಚಿವರು ತರಾಟೆ ತೆಗೆದುಕೊಂಡರು. ಇದೆ ವೇಳೆ, ಅಧಿಕಾರಿಯನ್ನು ಸಭೆಯಿಂದ ಹೊರ ಕಳುಹಿಸಿದ ಸಚಿವರು, ಅಧಿಕಾರಿಯ ಅಸಭ್ಯ ಕಾರ್ಯವೈಖರಿಯ ಬಗ್ಗೆ ನೋಟೀಸ್ ಜಾರಿ ಮಾಡಿ ಶಿಸ್ತಿನ ಕ್ರಮಕ್ಕಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ್ ಅವರು ಕೆಡಿಪಿ ಸಭೆಯ ಆಗುಹೋಗುಗಳ ಬಗ್ಗೆ ಆಲಿಸದೇ ರಮ್ಮಿಯಲ್ಲಿ ಮಗ್ನರಾಗಿರುವುದು ಖಾಸಗಿ ಸುದ್ದಿವಾಹಿನಿಯ ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ಖಾಸಗಿ ಸುದ್ದಿವಾಹಿನಿಯಲ್ಲಿ ವರದಿಯಾಗಿತ್ತು.

# ಎಸ್ಸೆಸ್ಸೆಲ್ಸಿ ಪಿಯುಸಿ, ಫಲಿತಾಂಶ ಸುಧಾರಣೆಗಾಗಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓಗೆ ಟಾಸ್ಕ್

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು–18** ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಈ ಬಾರಿ ರಾಯಚೂರ ಜಿಲ್ಲೆಯು ಉತ್ತಮ ಸ್ಥಾನ ಕಾಯ್ದುಕೊಳ್ಳುವ ಜವಾಬ್ದಾರಿಯನ್ನು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಓ ಅವರು ತೆಗೆದುಕೊಂಡು ಕಾರ್ಯಪ್ರವೃತ್ತರಾಗಬೇಕು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಹೇಳಿದರು.

ಜುಲೈ 18ರಂದು ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ತ್ರೈಮಾಸಿಕ ಕೆ.ಡಿ.ಪಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ರಾಯಚೂರ ಜಿಲ್ಲೆಯು ಪ್ರತಿ ಬಾರಿ ಕೆಳಗಿನ ಸ್ಥಾನ ಪಡೆಯುವುದು ಆರೋಗ್ಯಕರ ಬೆಳವಣಿಗೆಯಲ್ಲ. ಕಳಪೆ ಫಲಿತಾಂಶ ಪಡೆಯುವುದು ಕಳಂಕದ ಸಂಗತಿಯಾಗಿದೆ. ಹೀಗಾಗಿ ವಿಶೇಷವಾಗಿ ಜಿಲ್ಲಾಧಿಕಾರಿಗಳು ಮತ್ತು ಜಿಪಂ ಸಿಇಓ ಅವರು ಇದರ ಜವಾಬ್ದಾರಿ ಪಡೆದುಕೊಂಡು ಫಲಿತಾಂಶ ಸುಧಾರಣೆಗಾಗಿ ಸರ್ಕಾರಿ ಶಾಲೆಗಳಲ್ಲಿ ಏನು ಮಾಡಬಹುದು ಎಂಬುದರ ಬಗ್ಗೆ ಯೋಚಿಸಿ ಸುವ್ಯವಸ್ಥಿತ ಕಾರ್ಯದ ಯೋಜನೆ ರೂಪಿಸಿ ಕಾರ್ಯಶೀಲರಾಗಬೇಕು ಎಂದು ಸಚಿವರು ತಿಳಿಸಿದರು.

ಫಲಿತಾಂಶ ಸುಧಾರಣೆಗೆ ಸಂಬಂಧಿಸಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳನ್ನು ಪ್ರತಿ ಹಳ್ಳಿಗೆ ಒಬ್ಬರಂತೆ ಮತ್ತು ತಾಲೂಕುಮಟ್ಟದ ಅಧಿಕಾರಿಗಳನ್ನು ಪ್ರತಿ ಶಾಲೆಗೆ ಒಬ್ಬರಂತೆ ನೋಡಲ್ ಅಧಿಕಾರಿಗಳು ಎಂದು ನೇಮಿಸಿ ಅಧಿಕಾರಿಗಳಿಗೆ ಕಾರ್ಯಹಂಚಿಕೆ ಮಾಡಬೇಕು ಎಂದು ಸಚಿವರು ಸಲಹೆ ಮಾಡಿದರು. ಶಿಕ್ಷಣದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಮಹತ್ವದ ಹಂತಗಳಾಗಿವೆ. ಬಹಳಷ್ಟು ಮಕ್ಕಳಲ್ಲಿ ಪರೀಕ್ಷಾ ಭಯ ಇರುತ್ತದೆ. ಹಾಗಾಗಿ ಮೇಲಿಂದ ಮೇಲೆ ಕಿರು ಪರೀಕ್ಷೆ ಮತ್ತು ವಿಶೇಷ ತರಗತಿಗಳನ್ನು ನಡೆಸಿ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕು. ಒಟ್ಟಾರೆ ಫಲಿತಾಂಶ ಸುಧಾರಣೆಗೆ ಶಾಲಾ ಶಿಕ್ಷಣ ಇಲಾಖೆ ಮತ್ತು ಪಿಯು ಶಿಕ್ಷಣ ಇಲಾಖೆಗಳು ಈಗಿಂದಲೇ ಸನ್ನದ್ದವಾಗಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

**ಅಧಿಕಾರಿಗಳಿಗೆ ಎಚ್ಚರಿಕೆ:** ಶಾಲಾ ಕಾಲೇಜುಗಳಲ್ಲಿ ಫಲಿತಾಂಶ ಸುಧಾರಣೆಗೆ ನಿಮ್ಮಲ್ಲಿ ಪ್ಲಾನ್ ಇದೆಯಾ? ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಪ್ರಶ್ನಿಸಿದ ಸಚಿವರು, ಫಲಿತಾಂಶ ಕುಸಿಯಲು ಶಿಕ್ಷಕರ ಕೊರತೆ ಕಾರಣ ಎಂಬುದರಲ್ಲಿ ಹುರುಳಿಲ್ಲ. ನಮ್ಮಲ್ಲಿ ಶಿಕ್ಷಕರ ಕೊರತೆ ಇಲ್ಲ. ಶಾಲಾ ಕಾಲೇಜುಗಳಿಗೆ ನಿಯಮಿತ ಭೇಟಿ ನೀಡಿ, ಶಿಕ್ಷಕರ ಮತ್ತು ಮಕ್ಕಳ ಹಾಜರಾತಿ ಮತ್ತು ಕಲಿಕೆಯ ಗುಣಮಟ್ಟ ಪರಿಶೀಲಿಸದೇ ಮಾನಿಟರಿಂಗ್ ಮಾಡುವಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಿಂದೆ ಬಿದ್ದಿರುವುದೇ ಫಲಿತಾಂಶ ಕುಸಿಯಲು ಕಾರಣವಾಗಿದೆ. ಇದು ಸರಿಯಲ್ಲ ಎಂದು ಸಚಿವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸಿಇಓ ಅಧ್ಯಕ್ಷತೆಯಲ್ಲಿ ಕಮೀಟಿ ರಚಿಸಿ: ನಮ್ಮ ಜಿಲ್ಲೆಯ ಮಕ್ಕಳು ಪ್ರತಿಭಾನ್ವಿತರಿದ್ದಾರೆ. ಆದರೆ ಕೆಲವು ಶಿಕ್ಷಕರು ಮತ್ತು ಉಪನ್ಯಾಸಕರ ನಿಷ್ಕಾಳಜಿಯಿಂದಾಗಿ ಫಲಿತಾಂಶ ಕುಸಿಯುತ್ತಿದೆ. ಈ ಬಗ್ಗೆ ಸಮಗ್ರ ಚಿಂತನ ಮಂಥನ ನಡೆಸಿ ಕಾರ್ಯಯೋಜನೆ ರೂಪಿಸಲು ಜಿಲ್ಲಾ ಪಂಚಾಯತ್ ಸಿಇಓ ಅವರ ಅಧ್ಯಕ್ಷತೆಯಲ್ಲಿ ಒಂದು ಜಿಲ್ಲಾಮಟ್ಟದ ಕಮಿಟಿಯನ್ನು ರಚಿಸಬೇಕು ಎಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಪ್ರತಿ ವರ್ಷ ಹತ್ತು ಸಾವಿರ ಸಸಿ ನೆಡಿಸಿ: ಉತ್ತಮವಾದ ಪರಿಸರ ಸಿಗುವ ನಿಟ್ಟಿನಲ್ಲಿ ರಾಯಚೂರ ಸಿಟಿಯಲ್ಲಿ ಪ್ರತಿ ವರ್ಷ ಹತ್ತು ಸಾವಿರ ಸಸಿ ನೆಟ್ಟು ಪೋಷಣೆ ಮಾಡಬೇಕು. ಎಲ್ಲ ತಾಲೂಕುಗಳಲ್ಲಿ




ಸಹ ಗರಿಷ್ಟ ಮಟ್ಟದಲ್ಲಿ ಸಸಿ ನೆಡಲು ಕ್ರಮವಹಿಸಬೇಕು ಎಂದು ಸಚಿವರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ತಾಲೂಕು ಆಸ್ಪತ್ರೆ ಬೇಕು:** ರಾಯಚೂರ ಗ್ರಾಮೀಣ ಕ್ಷೇತ್ರದ ಜನರಿಗೆ ಅನುಕೂಲವಾಗುವ ಹಾಗೆ ತಾಲೂಕು ಆಸ್ಪತ್ರೆ ಮಂಜೂರಾತಿಗೆ ಪ್ರಸ್ತಾವಣೆ ಕಳುಹಿಸುವಂತೆ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು. ಶಾಲೆಗಳಿಗೆ ಶೌಚಾಲಯವಿಲ್ಲ: ಸಿಂಧನೂರಿನ ಬಹುತೇಕ ಶಾಲೆಗಳಿಗೆ ಶೌಚಾಲಯಗಳಿಲ್ಲ. ಬಹುತೇಕ ಶಾಲೆಗಳಲ್ಲಿ ಕಂಪ್ಯೂಟರ್ ತುಕ್ಕು ಹಿಡಿಯುತ್ತಿದ್ದು, ಮಕ್ಕಳಿಗೆ ಕಂಪ್ಯೂಟರ್ ಶಿಕ್ಷಣ ಕಲಿಸುವವರು ಇಲ್ಲದಂತಾಗಿದೆ ಎಂದು ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ ಅವರು ಹೇಳಿದರು.

**ಲಿಂಗಸೂರಿಗೆ ಕ್ರಿಟಿಕಲ್ ಕೇರ್ ಆಸ್ಪತ್ರೆ ಕೊಡಿ:** ಲಿಂಗಸೂರ ತಾಲೂಕಿನ ಜನತೆಗೆ ಅನ್ಯಾಯವಾಗದ ಹಾಗೆ 50 ಬೆಡ್ ನ ಕ್ರಿಟಿಕಲ್ ಕೇರ್ ಆಸ್ಪತ್ರೆಯನ್ನು ಲಿಂಗಸೂರಗೆ ಕೊಡಲು ಪರಿಶೀಲಿಸಬೇಕು ಎಂದು ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ ಅವರು ತಿಳಿಸಿದರು.

ಸಭೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರುವಿಹಾಳ, ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ಗಜಾನನ ಬಾಳೆ, ಕೆಡಿಪಿ ನಾಮ ನಿರ್ದೇಶಿತ ಸದಸ್ಯರಾದ ಶಫಿವುಲ್ಲಾಖಾನ್ ಮೆಹಬೂಬ, ತಿಮ್ಮಪ್ಪ ಮಲ್ಲಯ್ಯ, ರುದ್ರಾಗೌಡ ಮಹಾಂತಗೌಡ, ಸೋಮಶೇಖರ ಪಾಟೀಲ, ಮೀನಾಕ್ಷಿ ರಾಮಸ್ವಾಮಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶರಣಬಸವರಾಜ, ಸಿಪಿಓ ಡಾ.ಟಿ.ರೋಣಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H